# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 25 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 07–08–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 25 | Title- Code: KARKAN 28269 | Chitradurga | Date: 07-08-2024 Wednesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಮೋದಿ ರೈತರ ಸಮಸ್ಯೆಗಳತ್ತ ಕಣ್ಣೆತ್ತಿ ನೋಡುತ್ತಿಲ್ಲ 2

ಪೊಲೀಸರಿಗೆ ರಕ್ಷಣೆ ಕೊಡುವ ಸ್ಥಿತಿ ನಿರ್ಮಾಣ: ಭಾಸ್ಕರ್ ರಾವ್ ಕಿಡಿ 3

ಡಾಕ್ಟರೇಟ್ ಪ್ರಶಸ್ತಿ ತಿರಸ್ಕರಿಸಿದ ಕಿಚ್ಚ ಸುದೀಪ್ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

# ವಯನಾಡಿನಲ್ಲಿ ಚಳ್ಳಕೆರೆ ಪುತ್ರಿಯ ದಿಟ್ಟ ಕಾರ್ಯ; ಎಲ್ಲೆಡೆಯಿಂದ ಮೆಚ್ಚುಗೆ

» ಚಳ್ಳಕೆರೆ

ಕೇರಳದ ವಯನಾಡಿನಲ್ಲಿ ಕಳೆದ ವಾರ ನಡೆದ ಪ್ರಕೃತಿವಿಕೋಪದಲ್ಲಿ ಕಂಡುಕೇಳರಿದಂತಹ ದುರಂತ ನಡೆದಿದೆ. ಈ ದುರಂತದ ಪರಿಸ್ಥಿತಿಯನ್ನು ನಿಬಾಯಿಸುವ ಹೊಣೆಗಾರಿಕೆ ಕನ್ನಡತಿ, ಚಳ್ಳಕೆರೆಯ ಮಗಳು, ವಯನಾಡು ಜಿಲ್ಲಾಧಿಕಾರಿ ಮೇಘಶ್ರೀ ಯಶಸ್ವಿಯಾಗಿ ನಿಬಾಯುಸಿದ ಹೆಮ್ಮೆ ಕನ್ನಡಿಗರದ್ದು.

ತಾಲ್ಲೂಕಿನ ನಿವೃತ್ತ ಬ್ಯಾಂಕ್ ಅಧಿಕಾರಿ ಎಸ್.ರುದ್ರಮುನಿಯಪ್ಪ, ಶಿಕ್ಷಕಿ ರುಕ್ಮಿಣಿದೇವಿಯ ಪುತ್ರಿಯಾದ ಮೇಘಶ್ರೀ ತಾಲ್ಲೂಕಿನದೊಡ್ಡೇರಿ ಗ್ರಾಮದ ಮಗಳು. ಚಳ್ಳಕೆರೆ ತಾಲ್ಲೂಕಿನಲ್ಲಿ ತಮ್ಮ ಪ್ರಾಥಮಿಕ ವಿದ್ಯಾಭ್ಯಾಸವನ್ನು ಮುಗಿಸಿದವರು. ಬೆಂಗಳೂರಿನಲ್ಲಿ ಪಿಯುಸಿವಿದ್ಯಾಭ್ಯಾಸ ಪೂರೈಸಿದ ಅವರ ಇಂಜಿನಿಯರಿಂಗ್ ಪದವಿ ಪಡೆದ ಬೆಂಗಳೂರು ಖಾಸಗಿ ಪಂಕನಿಯಲ್ಲಿ ಕೆಲಸ ಪ್ರಾರಂಭಿಸಿದರು. ಚಿಕ್ಕಂದಿನಿಂದಲೂ ಸಾರ್ವಜನಿಕ ಸೇವೆ ಮಾಡಬೇಕೆಂಬ ಕನಸು ಹೊತ್ತಿದ್ದ ಅವರು 2016ರಲ್ಲಿ ಕೆಎಎಸ್ ಪರೀಕ್ಷೆ ಬರೆದು ಜಿಲ್ಲಾಧಿಕಾರಿಯಾಗಿ ಆಯ್ಕೆಯಾದರು.

ಕಳೆದ ವಾರ ಸಂಭವಿಸಿದ ವಯನಾಡು ಗುಡ್ಡ ಕುಸಿತ ಘಟನೆ ಸಂಭವಿಸುವ 10–15 ದಿನಗಳ ಹಿಂದೆ ಅಧಿಕಾರವಹಿಸಿಕೊಂಡ ಚಳ್ಳಕೆರೆಯ ಪುತ್ರಿ ಮೇಘಶ್ರೀ ಘಟನೆಯನ್ನು



ನಿಬಾಯಿಸುವಲ್ಲಿ ಯಶಸ್ವಿಯಾಗಿದ್ದಾರೆ. ಹಗಲು, ರಾತ್ರಿ ಎನ್ನದೆ ಮಣ್ಣಿನಲ್ಲಿ ಕಣ್ಮರೆಯವರನ್ನು ಹುಡುಕಿಸುತ್ತಿದ್ದಾರೆ. ದುರಂತ ನಡೆದ ದಿನದಿಂದಲ್ಲೂ ತಮ್ಮ ಘಟನೆ ನಡೆದ ಸ್ಥಳದಲ್ಲೇ ಮೊಕ್ಕಾಂ ಮಾಡಿ ಕಾರ್ಯನಿರ್ವಹಿಸುತ್ತಿದ್ದಾರೆ. ಜಿಲ್ಲಾಧಿಕಾರಿಯಾಗಿ ಆಗಮಿಸಿದ ಕೆಲವೇ ದಿನಗಳಲ್ಲಿ ಅವರು ಅತಿ ದೊಡ್ಡ ಸವಾಲು ಎದುರಿಸಿದ ಚಳ್ಳಕೆರೆ ಪತ್ರಿಯ ಕಾರ್ಯ ಮೆಚ್ಚುವಂತದ್ದು.

ಚಳ್ಳಕೆರೆಯಲ್ಲಿ ಬ್ಯಾಂಕ್ ಅಧಿಕಾರಿಯಾಗಿ ತಮ್ಮ ಸೇವೆಯನ್ನು ಪ್ರಾರಂಭಿಸಿದ ಅವರು,



ಹಿರಿಯವ್ಯವಸ್ಥಾಪಕರಾಗಿನಿವೃತ್ತರಾಗಿದ್ದಾರೆ. ನಂತರ ತಮ್ಮ ಗ್ರಾಮದ ಜಮೀನಿನಲ್ಲಿ ಕೃಷಿ ಚಟುವಟಿಕೆಯಲ್ಲಿ ತೊಡಗಿಕೊಂಡಿದ್ದಾರೆ. ಮೇಘಶ್ರೀತಾಯಿ ರುಕ್ಮಣಿದೇವಿಯೂ ಸಹ ಶಿಕ್ಷಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಜುಲೈ30ರಂದು ವಯನಾಡುನಲ್ಲಿ ಈ ಭೀಕರ ದುರಂತ ನಡೆದಿದೆ. ನಾನು ಒಂದು ದಿನ ಮೊದಲು ನನ್ನ ಮಗಳು, ಮೊಮಕ್ಕಳೊಂದಿಗೆ ಇದ್ದು ಜುಲೈ 29ರ ಬೆಳಗ್ಗೆ ಬೆಂಗಳೂರಿಗೆ ವಾಪಾಸ್ ಆಗಿದ್ದೆ. ಸುದ್ದಿ ಮಾಧ್ಯಮಗಳಲ್ಲಿ ಸುದ್ದಿ ಪ್ರಸಾರವಾದಾಗ ವಿಚಲಿತನಾದೇ ಕೂಡಲೇ ಮಗಳಿಗೆ ದೂರವಾಣಿ ಮೂಲಕ ಜನರ ಸೇವೆಗೆ ಮುಂದಾಗುವಂತೆ ತಿಳಿಸಿದೆ. ಈ ಕ್ಷಣದಲ್ಲೂ ಪುತ್ರಿ ಆರ್.ಮೇಘಶ್ರೀ ಕಳೆದ ಸುಮಾರು 10 ದಿನಗಳಿಂದ ಹಗಲು, ರಾತ್ರಿ ಎನ್ನದೆ ಜನರ ಸೇವೆಯಲ್ಲಿ ತೊಡಗಿದ್ದಾಳೆ. ಮೇಘಶ್ರೀರವರ ಸೇವಾ ಕಾರ್ಯದ ಬಗ್ಗೆ ಎಲ್ಲೆಡೆಯಿಂದ ಪ್ರಶಂಸೆ ವ್ಯಕ್ತವಾಗುತ್ತಿದೆ. ಕೇವಲ ಕರ್ನಾಟಕವಷ್ಟೇಯಲ್ಲದೆ, ಬೇರೆ, ಬೇರೆಕಡೆಯಿಂದಲೂ ಜನರು ದೂರವಾಣಿ ಮೂಲಕ ಅಭಿನಂದಿಸುತ್ತಿದ್ದಾರೆ.

ಮೇಘಶ್ರೀರವರ ಪತಿ ಡಾ.ವಿಕ್ರಂಸಿಂಹ ಕೃಷಿ ವಿಶ್ವವಿದ್ಯಾಲಯದಲ್ಲಿ ಸಹಾಯಕಪ್ರಾಧ್ಯಾಪಕರಾಗಿದ್ದಾರೆ. ಅವರ ಕುಟುಂಬವೂ ಸಹ ಮೇಘಶ್ರೀರವರ ಕಾರ್ಯಕ್ಕೆ ಸಂಪೂರ್ಣ ಬೆಂಬಲ ನೀಡಿದ್ದಾರೆ. ಒಟ್ಟಾರೆ ಆರ್.ಮೇಘಶ್ರೀ ಎಲ್ಲರ ವಿಶ್ವಾಸ, ಪ್ರೀತಿ ಗಳಿಸುವುದರಲ್ಲಿ ಯಶಸ್ವಿಯಾಗಿದ್ದಾರೆ. ಮನೆಯಲ್ಲಿಎರಡುಪುಟ್ಟಹೆಣ್ಣುಮಕ್ಕಳಿದ್ದರೂ ಸಹ ಅವರ ಆರೈಕೆಯತ್ತ ಸ್ವಲ್ಪ ಗಮನ ನೀಡಿ ಉಳಿದ ಪೂರ್ಣಸಮಯವನ್ನು ಜನರ ಸೇವೆಗೆ ಮುಡಿಪಾಗಿಟ್ಟಿದ್ದಾರೆ. ವಿದ್ಯಾರ್ಥಿನಿಯಾಗಿದ್ದಾಗಲೇ ಆಕೆಗೆ ದೇಶಾಭಿಮಾನ ಹೆಚ್ಚಾಗಿತ್ತು. ಕಂಪ್ಯೂಟರ್ ಸೈನ್ಸ್‌ನಲ್ಲಿ ಬಿಇ ಶಿಕ್ಷಣ ಮುಗಿಸಿದ್ದರೂ 2016ರಲ್ಲಿ ಐಎಎಸ್ ಅಧಿಕಾರಿಯಾಗಿ ಆಯ್ಕೆಯಾಗಿ ವಯನಾಡು ಜಿಲ್ಲಾಧಿಕಾರಿಯಾಗಿ ಅನೇಕ ಸವಾಲುಗಳ ಮಧ್ಯೆಯೂ ಸಹ ದೃತಿಗೆಡದೆ ಕಾರ್ಯನಿರ್ವಹಿಸುತ್ತಿರುವುದು ಸಂತಸ ತಂದಿದೆ ಎಂದರು.

# ವೇದಾವತಿ ನದಿಯ ಒಡಲು ಸೇರಿದ ಭದ್ರೆ

» ಹೊಸದುರ್ಗ

ಮಧ್ಯ ಕರ್ನಾಟಕದ ಜಲಪಾತ್ರೆ ಎಂದೇ ಖ್ಯಾತಿ ಪಡೆದಿರುವ ವಿವಿ ಸಾಗರ ಜಲಾಶಯಕ್ಕೆ ಸೋಮವಾರ ರಾತ್ರಿಯಿಂದಲೇ ಭದ್ರಾ ಜಲಾಶಯದಿಂದ ನೀರು ಹರಿಸಲಾಗಿದ್ದು, ಮಂಗಳವಾರ ಸಂಜೆ ಹೊತ್ತಿಗೆ ವೇದಾವತಿ ನದಿಯ ಒಡಲಿಗೆ ಭದ್ರಾ ನೀರು ಬಂದು ಸೇರಿದೆ. ಇದರಿಂದಾಗಿ ಕೋಟೆನಾಡಿನ ಜನರ ಮೊಗದಲ್ಲಿ ಸಂತಸ ಮೂಡಿದೆ.

ಚಿಕ್ಕಮಗಳೂರು ಜಿಲ್ಲೆಯ ಹಲವೆಡೆ ನಿರಂತರವಾಗಿ ಸುರಿಯುತ್ತಿರುವ ಮಳೆಗೆ ಲಕ್ಕವಳ್ಳಿಯ ಭದ್ರಾ ಜಲಾಶಯ ಭರ್ತಿಯಾದ ಹಿನ್ನಲೆಯಲ್ಲಿ ಜಲಾಶಯದ ನೀರನ್ನು ವಿವಿ ಸಾಗರ ಜಲಾಶಯಕ್ಕೆ ಹರಿಸಬೇಕೆಂದು ಸರ್ಕಾರ ಆದೇಶಿಸಿದೆ. ಅದರ ನಿಯಮದಂತೆ



ಸೋಮವಾರ ರಾತ್ರಿ ಅಜ್ಜಂಪುರ ತಾಲೂಕಿನ ಬೆಟ್ಟ ತಾವರೆಕೆರೆಯ ಬಳಿಯ ಪಂಪ್ ಹೌಸ್ ಮೂಲಕ ಒಂದು ಕ್ರೆಸ್ಟ್ ಗೇಟ್ ಮೂಲಕ ವಾಣಿವಿಲಾಸ ಸಾಗರ ಜಲಾಶಯಕ್ಕೆ ನೀರು ಬಿಡುವ ಕಾರ್ಯವನ್ನು ನೀರಾವರಿ ನಿಗಮದ ಅಧಿಕಾರಿಗಳು ಯಶಸ್ವಿಗೊಳಿಸಿದ್ದಾರೆ.

ವಿವಿ ಸಾಗರ ಜಲಾಶಯದಲ್ಲಿ ಪ್ರಸ್ತುತ ನೀರಿನ ಮಟ್ಟ 114.7 ಅಡಿ ಇದೆ. ಡ್ಯಾಮ್ ಭರ್ತಿಯಾಗಲೂ ಇನ್ನೂ 12 ಟಿಎಂಸಿ ನೀರು ಬೇಕಿದೆ. ಭದ್ರಾ ಜಲಾಶಯದಿಂದ ನಿತ್ಯವೂ 700 ಕ್ಯೂಸೆಕ್ ನಷ್ಟು ನೀರು ಹರಿದು ಬಂದರೆ, 17 ದಿನಕ್ಕೆ ಒಂದು ಟಿಎಂಸಿಯಷ್ಟು ನೀರು ಬರಲಿದೆ. ಭದ್ರಾ ನೀರಿನ ಜೊತೆಗೆ ಉತ್ತಮ ಮಳೆಯಾದರೆ, ಮತ್ತೊಮ್ಮೆ ವಾಣಿವಿಲಾಸಸಾಗರ ಜಲಾಶಯ ಭರ್ತಿಯಾಗುವ ಸಾಧ್ಯತೆಯಿದೆ. ಜಲಾಶಯಕ್ಕೆ ಇನ್ನೂ 12 ಟಿಎಂಸಿ ನೀರನ್ನು ಸಂಗ್ರಹ ಮಾಡಿಕೊಳ್ಳುವ ಸಾಮರ್ಥ್ಯವಿದೆ ಎಂದು ವಿಶ್ವೇಶ್ವರಯ್ಯ ಜಲನಿಗಮದ ಕಾರ್ಯಪಾಲಕ ಇಂಜಿನಿಯರ್ ವಿಜಯ್ ಕುಮಾರ್ ಮಾಹಿತಿ ನೀಡಿದ್ದಾರೆ.

## ಜೂಜು ಅಡ್ಡೆ ಮೇಲೆ ಪೊಲೀಸರ ದಾಳಿ: 48700 ಹಣ, 14 ಬೈಕ್ ವಶ

**ಚಳ್ಳಕೆರೆ:** ಕಳೆದ ಹಲವಾರು ತಿಂಗಳುಗಳಿಂದ ನಗರ ವೃತ್ತ ವ್ಯಾಪ್ತಿಯಲ್ಲಿ ಇಸ್ಪೀಟ್ ಜೂಜಾಟ ನಡೆಯದಂತೆ ಮುಂಜಾಗ್ರತಾ ಕ್ರಮ ವಹಿಸಿರುವ ಪೊಲೀಸ್ ಇಲಾಖೆ ಕಣ್ಣುತಪ್ಪಿಸಿ ಜೂಜಾಟವಾಡುತ್ತಿದ್ದ ತಂಡವನ್ನು ವಶಕ್ಕೆ ಪಡೆಯುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಜಿಲ್ಲಾ ರಕ್ಷಣಾಧಿಕಾರಿ, ಉಪವಿಭಾಗದ ಡಿವೈಎಸ್ಪಿಯವರ ಮಾರ್ಗದರ್ಶನದಲ್ಲಿ ಪಿಎಸ್ಐ ಧರೆಪ್ಪಬಾಳಪ್ಪದೊಡ್ಡಮನಿ ಮತ್ತು ತಂಡ ವೀರದಿಮ್ಮನಹಳ್ಳಿ, ನಾಯಕನಹಟ್ಟಿ ರಸ್ತೆಯ ಮಧ್ಯದಲ್ಲಿ ಜೂಜಾಟವಾಡುತ್ತಿದ್ದ ಜೂಜುಕೋರರು, ಮೋಟಾರ್ ಬೈಕ್ ಹಾಗೂ ಹಣವನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ. ಪೊಲೀಸ್ ಪೇದೆ ಶಂಕರಣ್ಣ ತನಗೆ ದೊರೆತ ಖಚಿತ ವರ್ತಮಾನದ ಮೇರೆಗೆ ಮೇಲ್ಕಂಡ ಸ್ಥಳಕ್ಕೆ ಮಂಗಳವಾರ ಸಂಜೆ ದಾಳಿ ನಡೆಸಿದ ಸಂದರ್ಭದಲ್ಲಿ ಅದೇ ಗ್ರಾಮದ ನಾಗರಾಜ(33) ಇತರೆಯವರು ಜೂಜಾಟವಾಡುತ್ತಿದ್ದು, ಅವರಿಂದ ಜೂಜಾಟಕ್ಕೆ ಪಣವಾಗಿಟ್ಟಿದ್ದ ಸುಮಾರು 48700ರೂ ನಗದು ಹಾಗೂ 14 ಬೈಕ್‌ಗಳನ್ನು ವಶಕ್ಕೆ ಪಡೆದಿರುತ್ತಾರೆ. ಠಾಣಾಧಿಕಾರಿ ಕಮಲಕರ್ ಪ್ರಕರಣ ದಾಖಲಿಸಿದ್ದಾರೆ.

**ಪ್ರಮುಖ ಸುದ್ದಿ**

# ಎದೆ ಹಾಲುಣಿಸಲು ತಾಯಿಗೆ ಪ್ರೋತ್ಸಾಹ ನೀಡಿ

» ಚಿತ್ರದುರ್ಗ

ಮಕ್ಕಳಿಗೆ ಎದೆ ಹಾಲುಣಿಸಲು ಇರುವ ಕೊರತೆಗಳನ್ನು ನೀಗಿಸಿ, ಎದೆಹಾಲುಣಿಸಲು ತಾಯಿಗೆ ಪ್ರೋತ್ಸಾಹ ನೀಡಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಬೊಮ್ಮನಹಳ್ಳಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಮಂಗಳವಾರ ಆರೋಗ್ಯ ಇಲಾಖೆ ಮತ್ತು ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದೊಂದಿಗೆ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿಶ್ವ ಸ್ತನ್ಯಪಾನ ಸಪ್ತಾಹವನ್ನು ಪ್ರತಿ ವರ್ಷ ಆಗಸ್ಟ್ ತಿಂಗಳ ಮೊದಲನೇ ವಾರ ಆಚರಿಸಲಾಗುತ್ತದೆ. ತಾಯಿಯ ಎದೆ ಹಾಲು ಮಗುವಿಗೆ ಅಮೃತ ಧಾರೆ. ತಾಯಿ ಎದೆ ಹಾಲಿನಲ್ಲಿ ಅಪರಿಮಿತವಾದ ಪೋಷಕಾಂಶಗಳು ಅಡಗಿವೆ. ಮಗುವಿಗೆ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ಹುಟ್ಟಿದ ತಕ್ಷಣ ಮಗುವಿಗೆ ಎಷ್ಟು ಬೇಗಸಾಧ್ಯವೋ ಅಷ್ಟು ಬೇಗ ಎದೆ ಹಾಲನ್ನು ಕುಡಿಸಬೇಕು ಎಂದರು.

ಎದೆ ಹಾಲು ಕೊಡುವುದರಿಂದ ತಾಯಿ ಮತ್ತು ಮಗುವಿನ ಮಧ್ಯೆ ಉತ್ತಮವಾದ



ಗಟ್ಟಿಯಾದ ಬಾಂಧವ್ಯ ಬೆಸೆಯುತ್ತದೆ. ಮಗು ಹುಟ್ಟಿದಾಗಿನಿಂದ 6 ತಿಂಗಳ ವಯಸ್ಸಾಗುವವರೆಗೂ ಎದೆಹಾಲನ್ನು ಬಿಟ್ಟು ಬೇರೆ ಏನನ್ನೂ ಕುಡಿಸಬಾರದು ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ಎದೆಹಾಲುಣಿಸುವುದು ಒಂದು ಸಹಜ ಕ್ರಿಯೆಯಾಗಿದ್ದರೂ, ಸಾಂಸ್ಥಿಕ ಹೆರಿಗೆಗಳು ಗಣನೀಯವಾಗಿ ಹೆಚ್ಚಾಗಿದ್ದರೂ, ಎದೆಹಾಲು ಕುಡಿಸುವ ಪ್ರಮಾಣ, ಎದೆಹಾಲು ಮುಂದುವರೆಸುವ ಪ್ರಮಾಣ ಕಡಿಮೆಯಾಗಿರುವುದು ಸಮೀಕ್ಷೆಗಳಿಂದ ಕಂಡುಬಂದಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ.

ಆರು ತಿಂಗಳವರೆಗೆ ಕೇವಲ ಎದೆಹಾಲು ಉಣಿಸುವ ಪ್ರಮಾಣ ಅಲ್ಪ ಪ್ರಮಾಣದಲ್ಲಿ ಬದಲಾವಣೆಯಾಗಿದೆ. ಬಹಳಷ್ಟು ತಾಯಂದಿರು ಎದೆಹಾಲು ಉಣಿಸಲು ಪ್ರಾರಂಭಿಸಿದರೂ, ಕೆಲವೇ ತಿಂಗಳುಗಳಲ್ಲಿ ಇತರ ಹಾಲು ಮತ್ತು ಪಾನೀಯಗಳನ್ನು ನೀಡಲು ಪ್ರಾರಂಭಿಸುತ್ತಾರೆ ಇದರಿಂದ ಶಿಶು ವಿವಿಧ ಸೋಂಕುಗಳಿಗೆ ಗುರಿಯಾಗುತ್ತದೆ. ಕೆಲವು ಸಂದರ್ಭಗಳಲ್ಲಿ ಮರಣವೂ ಸಂಭವಿಸಬಹುದು ಎಂದು ತಿಳಿಸಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಆರು ತಿಂಗಳವರೆಗೆ ಕೇವಲ ತಾಯಿಯ ಎದೆಹಾಲನ್ನು ಮಾತ್ರ ನೀಡಲು, ಎದೆಹಾಲಿನ ಸಂಪೂರ್ಣ ಲಾಭಗಳನ್ನು ಪಡೆಯಲು, ಮಗುವು ಸಂಪೂರ್ಣ ವಿಕಾಸ ಹೊಂದಲು, ಮಗುವನ್ನು ನ್ಯೂಮೋನಿಯಾ, ಅತಿಸಾರಭೇದಿ, ಅಪೌಷ್ಠಿಕತೆ ಇವುಗಳಿಂದ ತಡೆಗಟ್ಟಲು ಸ್ತನ್ಯಪಾನವು ಅತ್ಯಂತ ಮಹತ್ವಪೂರ್ಣ ಪಾತ್ರವನ್ನು ವಹಿಸುತ್ತದೆ ಎಂದರು.

ವಿಶ್ವ ಸ್ತನ್ಯಪಾನ ಸಪ್ತಾಹವು ಸ್ತನ್ಯಪಾನ ಮಾಡುವ ತಾಯಂದಿರಿಗೆ ಅನುಕೂಲಕರ ವಾತಾವರಣವನ್ನು ಕಲ್ಪಿಸಲು ಆರಂಭಿಕ ಬಾಲ್ಯದ ಬೆಳವಣಿಗೆ ಹೆಚ್ಚಿಸಲು ಮತ್ತು ಪೌಷ್ಠಿಕಾಂಶ ಸುಧಾರಿಸಲು ಹಾಗೂ ಶಿಶು ಮರಣ ಪ್ರಮಾಣ ಕಡಿಮೆ ಮಾಡಲು ಸ್ತನ್ಯಪಾನದ ಅತ್ಯಮೂಲ್ಯ ಪಾತ್ರವು ಒತ್ತಿಹೇಳಲು ಪ್ರಮುಖ ವೇದಿಕೆಯಾಗಿದೆ. ಸ್ತನ್ಯಪಾನ ಅಭ್ಯಾಸಗಳ ಸುಧಾರಣೆಗಾಗಿ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವ ಚಟುವಟಿಕೆಗಳಿಗೆ ಆದ್ಯತೆ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸುಲೋಚನಮ್ಮ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳಾದ ಗಾಯತ್ರಿ,ಎಂ.ಅನುಸೂಯ,ಸಮುದಾಯ ಆರೋಗ್ಯಾಧಿಕಾರಿ ಶ್ರೀನಿವಾಸ್, ಆರೋಗ್ಯ ನಿರೀಕ್ಷಣಾಧಿಕಾರಿ ಪ್ರವೀಣ್, ಅಂಗನವಾಡಿ ಕಾರ್ಯಕರ್ತೆ ಟಿ.ಶಶಿಕಲಾ, ಆಶಾ ಕಾರ್ಯಕರ್ತೆಯರಾದ ನಾಗಮ್ಮ, ಮಂಜುಳಾ ಹಾಗೂ ಎದೆ ಹಾಲುಣಿಸುವ ತಾಯಂದಿರು ಇದ್ದರು.

## ಫಾಸ್ಟ್ ನ್ಯೂಸ್

### ಸ್ಟೆನೋಗ್ರಾಫರ್ ಹುದ್ದೆಗಳಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಕೇಂದ್ರಸರ್ಕಾರದಸಿಬ್ಬಂದಿನೇಮಕಾತಿಆಯೋಗವು ಭಾರತ ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಸ್ಟೆನೋಗ್ರಾಫರ್ ಗ್ರೇಡ್ 'ಸಿ' ಮತ್ತು 'ಡಿ' ಹುದ್ದೆಗಳ ನೇಮಕಾತಿಗೆ ಮುಕ್ತ ಸ್ಪರ್ಧಾತ್ಮಕ ಕಂಪ್ಯೂಟರ್ ಆಧಾರಿತ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 17 ಅರ್ಜಿ ಸಲ್ಲಸಲು ಕೊನೆಯ ದಿನವಾಗಿದೆ. ಅರ್ಜಿ ಸಲ್ಲಿಸಬಯಸುವವರು ಪಿಯುಸಿ ಅಥವಾ ತತ್ಸಮಾನ ಪದವಿ ಪಡೆದಿರಬೇಕು. ಶೀಘ್ರಲಿಪಿ ಮತ್ತು ಬೆರಳಚ್ಚು ಕೌಶಲ್ಯ ಹೊಂದಿರುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಸ್ಟೆನೋಗ್ರಾಫರ್ ಗ್ರೇಡ್ ಸಿ ಅಭ್ಯರ್ಥಿಗಳಿಗೆ 18–30 ವರ್ಷಗಳು, ಗ್ರೇಡ್ ಡಿ ಅಭ್ಯರ್ಥಿಗಳಿಗೆ 18–27 ವರ್ಷಗಳು, (ಎಸ್.ಟಿ, ಎಸ್.ಸಿ, ಒಬಿಸಿ, ಇಎಸ್‌ಎಂ) ಇತರ ನಿರ್ದಿಷ್ಟ ವರ್ಗಗಳಿಗೆ ವಯೋಮಿತಿ ಸಡಿಲಿಕೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಿಬ್ಬಂದಿ ಆಯೋಗದ ವೆಬ್‌ಸೈಟ್ www.ssckkr.kar.nic.in/ https://ssc.nic.in ವೆಬ್‌ಸೈಟ್ ಭೇಟಿ ನೀಡಬಹುದು ಹಾಗೂ ದೂರವಾಣಿ ಸಂಖ್ಯೆ 080–25502520, ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ದೂರವಾಣಿ ಸಂಖ್ಯೆ 9945587060, 7022459064 ಗೆ ಸಂಪರ್ಕಿಸಬಹುದು ಎಂದು ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹೈನುಗಾರಿಕೆ ತರಬೇತಿ

» ಚಿತ್ರದುರ್ಗ

ದಾವಣಗೆರೆ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ವತಿಯಿಂದ ಇದೇ ಆಗಸ್ಟ್ 8 ಮತ್ತು 9 ರಂದು ದಾವಣಗೆರೆ ನಗರದ ಪಿ.ಬಿ.ರಸ್ತೆಯ ಅರುಣ ಚಿತ್ರಮಂದಿರದ ಎದುರಿನ ಪಶು ಆಸ್ಪತ್ರೆ ಆವರಣದಲ್ಲಿರುವ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ರೈತರಿಗೆ ಆಧುನಿಕ ಹೈನುಗಾರಿಕೆ ತರಬೇತಿ ಹಮ್ಮಿಕೊಳ್ಳಲಾಗಿದೆ. ತರಬೇತಿಗೆ ಹಾಜರಾಗುವ ರೈತರು ಆಧಾರ್ ಕಾರ್ಡ್ ಜೆರಾಕ್ಸ್, ಎರಡು ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಗಳೊಂದಿಗೆ ತರಬೇತಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08192–233787 ಗೆ ಸಂಪರ್ಕಿಸಬಹುದು ಎಂದು ತರಬೇತಿ ಕೇಂದ್ರದ ಮುಖ್ಯ ಪಶು ವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

### ವಿದ್ಯಾರ್ಥಿ ವೇತನಕ್ಕೆ ಅರ್ಜಿ

» ಚಿತ್ರದುರ್ಗ

2024–25ನೇ ಸಾಲಿಗೆ ರಾಷ್ಟ್ರೀಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ (ಎನ್.ಎಸ್.ಪಿ ಪೋರ್ಟಲ್) ಮೆಟ್ರಿಕ್ ಪೂರ್ವ ಹಾಗೂ ನಂತರದ ವಿದ್ಯಾರ್ಥಿ ವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ. ಅಕ್ಟೋಬರ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಜಿಲ್ಲೆಯ ವ್ಯಾಪ್ತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳು ತಾವುಗಳು ವ್ಯಾಸಂಗ ಮಾಡುತ್ತಿರುವ ಶಾಲಾ–ಕಾಲೇಜುಗಳು, ಶಿಕ್ಷಣ ಸಂಸ್ಥೆಗಳ ಮುಖಾಂತರ ಮೆಟ್ರಿಕ್ ಪೂರ್ವ ಹಾಗೂ ನಂತರದ ವಿದ್ಯಾರ್ಥಿ ವೇತನಕ್ಕೆ ವೆಬ್‌ಸೈಟ್ www.scholarships.gov.in ನಲ್ಲಿ ಅರ್ಜಿ ಸಲ್ಲಿಸಬಹುದು.ಅರ್ಹ ವಿಕಲಚೇತನ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಿ ಅರ್ಜಿಯ ಒಂದು ಪ್ರತಿಯನ್ನು ಆಯಾ ತಾಲ್ಲೂಕು ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು ಅಥವಾ ಗ್ರಾಮ ಪಂಚಾಯತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಗೆ ಸಲ್ಲಿಸಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದು. ಮಾಹಿತಿಗಾಗಿ ಆಯಾ ತಾಲ್ಲೂಕಿನ ತಾಲ್ಲೂಕು ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರನ್ನು ಸಂಪರ್ಕಿಸಬಹುದು.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್

### ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2024-25ನೇ ಸಾಲಿಗೆ ವಿವಿಧಯೋಜನೆಗಳಿಗೆಸೇವಾಸಿಂಧುತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿದೆ. ಡಿ.ದೇವರಾಜ ಅರಸು ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ), ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆ ಹಾಗೂ ಹೊಲಿಗೆ ಯಂತ್ರ ವಿತರಣೆ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.ಈ ಯೋಜನೆಗಳು ವಿಶ್ವಕರ್ಮ, ಉಪ್ಪಾರ, ಅಂಬಿಗ, ಸವಿತಾ, ಮಡಿವಾಳ, ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯ, ಒಕ್ಕಲಿಗ, ಲಿಂಗಾಯತ, ಕಾಡುಗೊಲ್ಲ, ಮರಾಠ, ಮತ್ತು ಇದರ ಉಪ ಸಮುದಾಯಗಳು ಹೊರತುಪಡಿಸಿ, ಹಿಂದಳಿದ ವರ್ಗಗಳಾದ ಪ್ರವರ್ಗ-1, 2ಎ, 3ಎ, ಮತ್ತು 3ಬಿ ಸಮುದಾಯಗಳಿಗೆ ಅನ್ವಯವಾಗುತ್ತದೆ. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು, ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು.ನಿಗಮದ ಯೋಜನೆಗಳಲ್ಲಿ ಒಂದು ಬಾರಿ ಯಾವುದಾದರು ಯೋಜನೆಯ ಪ್ರಯೋಜನೆ ಪಡೆದಿದ್ದಲ್ಲಿ ಅಂತಹವರು ಹಾಗೂ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023-24ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿತರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಸೌಲಭ್ಯಗಳನ್ನು ಪಡೆಯಲು ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ www.dbcdc.karnatak.gov.in ಅಥವಾ ನಿಗಮದ ದೂರವಾಣಿ ಸಂಖ್ಯೆ 080-22374832, 850770004 ಮತ್ತು 8050770005 ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ 08194-220882 ಗೆ ಸಂಪರ್ಕಿಸಬಹುದು ಎಂದು ಡಿ.ಬಿ.ಸಿ.ಡಿ.ಸಿ ಜಿಲ್ಲಾ ವ್ಯವಸ್ಥಾಪಕಿ ಹೆಚ್.ಶಿಲ್ಪಾ ತಿಳಿಸಿದ್ದಾರೆ.

### ವಿವಿಧ ಸೌಲಭ್ಯಕ್ಕಾಗಿ ವಿಕಲಚೇತನರಿಂದ ಅರ್ಜಿ

» **ಚಿತ್ರದುರ್ಗ**

ಜಿಲ್ಲಾ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2024-25ನೇ ಸಾಲಿಗೆ ಶುಲ್ಕ ಮರುಪಾವತಿ, ವಿವಾಹ ಪ್ರೋತ್ಸಾಹಧನ, ನಿರಾಮಯ, ಸ್ಪರ್ಧಾಚೇತನ ಯೋಜನೆಗಳಿಗೆ ಜಿಲ್ಲೆಯ ವಿಕಲಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ. ಸೆಪ್ಟೆಂಬರ್ 05 ಅರ್ಜಿ ಸಲ್ಲಿಸಲು ಕೊನೆಯ ದಿನ. ಈ ಯೋಜನೆಗಳಡಿ ಪ್ರಯೋಜನ ಪಡೆಯಲು ವಿಕಲಚೇತನರು ಕಡ್ಡಾಯವಾಗಿ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಆಧಾರ ಕಾರ್ಡ್ ಲಿಂಗ್ ಮಾಡಿಸಿರುವ ಉಳಿತಾಯ ಖಾತೆ ಪುಸ್ತಕ ಪ್ರತಿ ಹಾಗೂ ವೈದ್ಯಕೀಯ ಪ್ರಮಾಣ ಪತ್ರ, ವಿಕಲಚೇತನರ ವಿಶಿಷ್ಟ ಗುರುತಿನ ಚೀಟಿ (ಯುಡಿಐಡಿ), ಇತ್ತೀಚಿನ ಆದಾಯ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಮತ್ತು ಮತದಾರರ ಗುರುತಿನ ಚೀಟಿ, ನಿವಾಸಿ ದೃಢೀಕರಣ ಪತ್ರ ಹಾಗೂ ಇತ್ತೀಚಿನ ಭಾವಚಿತ್ರದೊಂದಿಗೆ ಅರ್ಜಿ ಸಲ್ಲಿಸಬೇಕು. ಈ ಯೋಜನೆಗಳ ಅರ್ಜಿ ನಮೂನೆಗಳನ್ನು www.dwdsc.kar.nic.in ವೆಬ್‌ಸೈಟ್‌ನಿಂದ ನೇರವಾಗಿ ಡೌನ್‌ಲೋಡ್ ಮಾಡಿಕೊಳ್ಳಬಹುದು. ತಾಲ್ಲೂಕು ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ, ಗ್ರಾಮ ಪಂಚಾಯಿತಿಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವಗ್ರಾಮೀಣಪುನರ್ವಸತಿ ಕಾರ್ಯಕರ್ತರು ಹಾಗೂ ನಗರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ಪುನರ್ವಸತಿ ಕಾರ್ಯಕರ್ತರನ್ನು ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಕಚೇರಿ, ಬಾಲಭವನ ಆವರಣ, ಸ್ಟೇಡಿಯಂ ಹತ್ತಿರ, ಚಿತ್ರದುರ್ಗ ದೂರವಾಣಿ ಸಂಖ್ಯೆ 08194-235284ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

### ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಶುಭಾಷಯ

» **ಚಿತ್ರದುರ್ಗ**

ಇದೇ ಆಗಸ್ಟ್ 07ರಂದು 10ನೇ ರಾಷ್ಟ್ರೀಯ ಕೈಮಗ್ಗ ನೇಕಾರರ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಜಿಲ್ಲೆಯ ಎಲ್ಲಾ ಕೈಮಗ್ಗ ನೇಕಾರರಿಗೆ 10ನೇ ರಾಷ್ಟ್ರೀಯ ಕೈಮಗ್ಗ ದಿನಾಚರಣೆಯ ಶುಭಾಷಯಗಳನ್ನು ಕೈಮಗ್ಗ ಮತ್ತು ಜವಳಿ ಇಲಾಖೆ ಉಪನಿರ್ದೇಶಕರು ಕೋರಿದ್ದಾರೆ.

# ಮೋದಿ ರೈತರ ಸಮಸ್ಯೆಗಳತ್ತ ಕಣ್ಣೆತ್ತಿ ನೋಡುತ್ತಿಲ್ಲ

» **ಚಿತ್ರದುರ್ಗ**



ರೈತರ ಸಾಲಮನ್ನಾ ಮಾಡುವುದಾಗಿ ಸುಳ್ಳು ಆಶ್ವಾಸನೆ ಕೊಟ್ಟು ಮೂರನೇ ಬಾರಿಗೆ ದೇಶದ ಪ್ರಧಾನಿಯಾಗಿರುವ ನರೇಂದ್ರ ಮೋದಿ ರೈತರ ಸಮಸ್ಯೆಗಳತ್ತ ಕಣ್ಣೆತ್ತಿ ನೋಡುತ್ತಿಲ್ಲ. ಸ್ವಾಮಿನಾಥನ್ ವರದಿ ಜಾರಿಯಾಗಿಲ್ಲ. ರೈತ ವಿರೋಧಿ ಕಾನೂನುಗಳನ್ನು ಜಾರಿಗೆ ತಂದು ಕೃಷಿ ಭೂಮಿ,ಮಾರುಕಟ್ಟೆಯನ್ನುಕಾರ್ಪೊರೇಟ್ ಕಂಪನಿಗಳಿಗೆ ವಹಿಸಿದ್ದಾರೆಂದು ಕರ್ನಾಟಕ ಸರ್ವೋದಯ ಪಕ್ಷದ ರಾಜ್ಯಾಧ್ಯಕ್ಷ ಚಾಮರಸಮಾಲಿ ಪಾಟೀಲ್ ಆಪಾದಿಸಿದರು.

ಪ್ರವಾಸಿ ಮಂದಿರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ರೈತರು, ದಲಿತರು, ಮಹಿಳೆಯರು, ಮಕ್ಕಳ ಆಶೋತ್ತರಗಳನ್ನು ಈಡೇರಿಸುವಲ್ಲಿ ಎಲ್ಲಾ ಪಕ್ಷಗಳು ವಿಫಲವಾಗಿವೆ. ದುಡಿಯುವ ವರ್ಗದ ಹಿತ ಕಾಯುವತ್ತ ಗಮನಹರಿಸುತ್ತಿಲ್ಲ. ಕೋಮು ಭಾವನೆ ಬಿತ್ತಿ ಜಾತಿ ಧರ್ಮಗಳ ನಡುವೆ ಸಂಘರ್ಷವಿಡುತ್ತಿದ್ದಾರೆ ಎಂದರು.

ರಾಮ ಮಂದಿಕ್ಕೆ ದೇಣಿಗೆ ಸಂಗ್ರಹಿಸಿ ಲೂಟಿ ಮಾಡಿದ್ದಾರೆ. ಸಾರ್ವಜನಿಕರ ತೆರಿಗೆ ಹಣದಿಂದ ಉದ್ಯಮಿಗಳ ನಲವತ್ತು ಲಕ್ಷ ಕೋಟಿ ರೂ.ಗಳ ಸಾಲ ಮನ್ನಾ ಮಾಡಿ ದುಡಿಯುವ ವರ್ಗವನ್ನು ಸಾಲದ ಕೂಪಕ್ಕೆ ನೂಕಿದ್ದಾರೆ. ಇದೆಲ್ಲಾ ಬಿಜೆಪಿ. ಹಗರಣವಾದರೆ ಇನ್ನು ಕಾಂಗ್ರೆಸ್ ಇವರಿಗಿಂತ ಭಿನ್ನವಾಗಿಲ್ಲ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಮುಡಾ ಹಗರಣ, ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ರೂ.ಗಳನ್ನು ಚುನಾವಣೆಯಲ್ಲಿ ಹೆಂಡಕ್ಕೆ ಹಂಚಲು ಬಳಸಿದ್ದಾರೆ. ಇದಕ್ಕಿಂತ ದಿವಾಳಿ ಇನ್ನೇನು ಬೇಕು ಎಂದು ಪ್ರಶ್ನಿಸಿದರು?

ಭ್ರಷ್ಟಾಚಾರ ನಿಗ್ರಹವಾಗಿಲ್ಲ. ರಾಜ್ಯದ 192 ತಾಲ್ಲೂಕುಗಳಲ್ಲಿ ಕಳೆದ ವರ್ಷ ಬರವಿತ್ತು. ಫಸಲ್ ಭೀಮ ಯೋಜನೆಯಲ್ಲಿ ಗೋಲ್‌ಮಾಲ್ ಆಗಿದೆ.ರೈತರಬೆಳೆಪರಿಹಾರ ಹಣ ಬೇರೆ ಬೇರೆ ಖಾತೆಗಳಿಗೆ ಹೋಗಿದೆ. ಸಬ್ಸಿಡಿಯಲ್ಲಿ ಮೋಸ, ಇನ್ನು ಇಂತಹ ಪಕ್ಷಗಳ ಹಿಂದೆ ರೈತರು ಹೋಗುವುದರಲ್ಲಿ ಅರ್ಥವಿಲ್ಲ. ಪರ್ಯಾಯ ರಾಜಕೀಯ ಪಕ್ಷ ತರಬೇಕೆಂಬುದು ನಮ್ಮ ಉದ್ದೇಶ. ಅದಕ್ಕಾಗಿ ಸರ್ವೋದಯ ಪಕ್ಷವನ್ನು ರಾಜ್ಯದಲ್ಲಿ ಪ್ರಭಲವಾಗಿ ಕಟ್ಟಬೇಕಾಗಿರುವುದರಿಂದ ಈಗಾಗಲೆ ಹದಿನೈದು ಜಿಲ್ಲೆಗಳಲ್ಲಿ ಘಟಕ ಆರಂಭಗೊಂಡಿದೆ. ಮುಂದೆ ಇನ್ನು ಹದಿನೈದು ಜಿಲ್ಲೆಗಳಲ್ಲಿ ಘಟಕ ರಚಿಸಿ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂ, ಜಿಲ್ಲಾಪಂಚಾಯಿತಿ, ವಿಧಾನಸಭೆ, ಪಾರ್ಲಿಮೆಂಟ್ ಚುನಾವಣೆಗೆ ಅಭ್ಯರ್ಥಿಗಳನ್ನುಕಣಕ್ಕಿಳಿಸುತ್ತೇವೆ.ಪ್ರಗತಿಪರ ಚಿಂತಕರನ್ನು ಒಟ್ಟಿಗೆ ಸೇರಿಸಿ ಗುಣಾತ್ಮಕ ರಾಜಕಾರಣ ಮಾಡಲಾಗುವುದು ಎಂದು ಹೇಳಿದರು.

ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಮಾತನಾಡಿ, ದೇಶದಲ್ಲಿ ಇಂಡಿಯಾ ವರ್ಸಸ್ ಎನ್.ಡಿ.ಎ. ಚುನಾವಣೆ ನಡೆದಿಲ್ಲ. ಸರ್ವಾಧಿಕಾರಿ ವರ್ಸಸ್ ಪ್ರಜಾಪ್ರಭುತ್ವದ ಚುನಾವಣೆಯಾಗಿರುವುದರಿಂದ ಕೇಂದ್ರದಲ್ಲಿ ಬಿಜೆಪಿ.ಗೆ ಬಹುಮತ ಸಿಕ್ಕಿಲ್ಲ. ಸಂವಿಧಾನ ಪ್ರಜಾಪ್ರಭುತ್ವ ಉಳಿಸುವ ತೀರ್ಮಾನ ತೆಗೆದುಕೊಂಡಿದ್ದೇವೆ ಎಂದರು.ಆ.9 ರಂದು ಕ್ವಿಟ್ ಇಂಡಿಯಾ ಚಳುವಳಿ ಅಂಗವಾಗಿ 541 ಸಂಘಟನೆಗಳು ಸೇರಿಕೊಂಡು ಸಂಯುಕ್ತ ಕಿಸಾನ್ ಮೋರ್ಚಾ ಮೇರೆಗೆ ಕಾರ್ಪೊರೇಟ್ ಕಂಪನಿಗಳೆ ದೇಶ ಬಿಟ್ಟು ತೊಲಗಿ ಎನ್ನುವ ಚಳುವಳಿ ನಡೆಸುತ್ತೇವೆ. ರೈತರ ಸಂಕಷ್ಟಗಳಿಗೆ ಇನ್ನು ಶಾಶ್ವತ ಪರಿಹಾರ ಕಂಡುಕೊಳ್ಳಲು ಆಗುತ್ತಿಲ್ಲ. ನಿಶ್ಯಕ್ತ ರಾಜಕಾರಣದಿಂದ ಕನ್ನಡಿಗರಿಗೆ ಉದ್ಯೋಗದಲ್ಲಿ ಮೀಸಲು ನೀಡಲು ಆಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕೇರಳದಲ್ಲಿ ವಯನಾಡ್ ದುರಂತ ಪ್ರಕೃತಿ ವಿಕೋಪದಿಂದ ಆಗಿದ್ದಲ್ಲ. ಅಭಿವೃದ್ಧಿ ನೆಪದಲ್ಲಿ ಬೆಟ್ಟ ಗುಡ್ಡಗಳನ್ನು ಕರಗಿಸುವುದು, ಮೈನ್ಸ್, ರೆಸಾರ್ಟ್‌ಗಳ ನಿರ್ಮಾಣ, ಪ್ರಕೃತಿ ವಿರುದ್ದ ಮಾನವ ಸಂಪತ್ತುಗಳನ್ನು ಕರಗಿಸುತ್ತಿರುವುದು ಇದಕ್ಕೆ ಕಾರಣ. ಕೇಂದ್ರ ಸರ್ಕಾರ ಇದನ್ನು ರಾಷ್ಟ್ರೀಯ ವಿಪತ್ತೆಂದು ಘೋಷಿಸುವಂತೆ ಒತ್ತಾಯಿಸಿದರು.

ಕೊಡಗಿನಲ್ಲಿ ಭೂಕುಸಿತವಾಗುತ್ತಿದೆ. ಮೈಸೂರಿನಲ್ಲಿ ಮಳೆ ಜಾಸ್ತಿ, ಸಂಡೂರಿನಲ್ಲಿ ಮೈನಿಂಗ್ ನಿರಂತರವಾಗಿ ನಡೆಯುತ್ತಿರುವುದರಿಂದ ಬಳ್ಳಾರಿ ಹಾಳಾಗಿದೆ. ಸೆ.4 ರಂದು ಬಳ್ಳಾರಿಗೆ ಹೋಗಿ ಹಿರೇಮಠ್ ನೇತೃತ್ವದಲ್ಲಿ ದಗಲ್‌ಬಾಜಿ ಗಣಿಗಾರಿಕೆ ವಿರುದ್ದ ಹೋರಾಡುತ್ತೇವೆ. ರೈತ ಚಳುವಳಿಗೆ 45 ವರ್ಷಗಳ ಇತಿಹಾಸವಿದೆ. ಕೆಲವರಿಂದ ಹಸಿರು ಟವಲ್‌ಗಳ ದುರುಪಯೋಗವಾಗುತ್ತಿದೆ. ರೈತ ಕುಟುಂಬಕ್ಕೊಬ್ಬ ಸದಸ್ಯ, ಊರಿಗೊಬ್ಬ ಕಾರ್ಯಕರ್ತನನ್ನು ನೇಮಿಸಿ ಭ್ರಷ್ಟ ಸರ್ಕಾರಗಳ ವಿರುದ್ದ ಚಳುವಳಿ ಆರಂಭಿಸಿ ಇನ್ನು ಮೂರ್‍ನಾಲ್ಕು ವರ್ಷಗಳಲ್ಲಿ ಪ್ರತಿ ಹಳ್ಳಿ ಹಳ್ಳಿಯಲ್ಲೂ ರೈತ ಸಂಘವನ್ನು ಬಲಿಷ್ಟವಾಗಿ ಕಟ್ಟುತ್ತೇವೆಂದು ತಿಳಿಸಿದರು.

ಕರ್ನಾಟಕ ಸರ್ವೋದಯ ಪಕ್ಷದ ಖಜಾಂಚಿ ಅಂಜದ್ ಪಾಷ ಮಾತನಾಡಿ ರಾಷ್ಟ್ರೀಯ ಪಕ್ಷಗಳ ಧೋರಣೆ, ಸಿದ್ದಾಂತಕ್ಕೆ ಜನ ಬೇಸತ್ತಿದ್ದಾರೆ. ಕಾರ್ಪೊರೇಟ್‌ನವರು ನೀಡುವ ಫಂಡ್‌ನಿಂದ ಚುನಾವಣೆಗೆ ನಿಲ್ಲುತ್ತಾರೆ. ರೈತ ಸಂಘ ದಲಿತ ಸಂಘಟನೆಗಳನ್ನು ಸೇರಿಸಿಕೊಂಡು ಆಳುವ ಪಕ್ಷಗಳ ವಿರುದ್ದ ಹೋರಾಡುತ್ತೇವೆ. ರೈತರ ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುವ ಪ್ರಾಮಾಣಿಕ ಸರ್ಕಾರ ಬೇಕಾಗಿದೆ. ಕಾರ್ಪೊರೇಟ್‌ಗಳ ಪರವಾಗಿ ಕೆಲಸ ಮಾಡುತ್ತಿರುವ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಗೆ ಜನ ಸಾಮಾನ್ಯರ ಸಮಸ್ಯೆಗಳ ನಿವಾರಣೆ ಬೇಕಾಗಿಲ್ಲ. ತಳಮಟ್ಟದಿಂದ ಸರ್ವೋದಯ ಪಕ್ಷ ಸಂಘಟಿಸಿ ಪರ್ಯಾಯ ರಾಜಕಾರಣ ಮಾಡುವುದು ನಮ್ಮ ಮುಂದಿರುವ ಗುರಿ ಎಂದು ಹೇಳಿದರು.

ಸರ್ವೋದಯ ಕರ್ನಾಟಕ ಪಕ್ಷದ ಜಿಲ್ಲಾಧ್ಯಕ್ಷ ಜೆ.ಯಾದವರೆಡ್ಡಿ, ಖಜಾಂಚಿ ಶಿವರಾಜ್ ರೇವಣಸಿದ್ದಯ್ಯ, ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಬಸ್ತಿಹಳ್ಳಿ ಜಿ.ಸುರೇಶ್‌ಬಾಬು, ಉಪಾಧ್ಯಕ್ಷ ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ರಾಜ್ಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ, ಗೋಪಾಲ್‌ಪಾಪೆಗೌಡ ಶಂಕರೇಗೌಡ, ಹೊರಕೇರಪ್ಪ ಹಾಜರಿದ್ದರು.

### ಬಿಜೋಪಚಾರ ಮತ್ತು ಸುರಕ್ಷಿತ ಪೀಡೆನಾಶಕ ಬಳಕೆಯ ತರಬೇತಿ ಹಾಗೂ ಪ್ರಾತ್ಯಕ್ಷಿಕೆ

# ಕೀಟನಾಶಕ ಬಳಸುವಾಗ ಮುನ್ನೆಚ್ಚರಿಕೆ ಕ್ರಮ ಅನುಸರಿಸಿ

» **ಚಿತ್ರದುರ್ಗ**



ಕೀಟನಾಶಕ ಬಳಸುವಾಗ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಬೇಕು ಎಂದು ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕರು ಹಾಗೂ ಮುಖ್ಯಸ್ಥ ಆರ್.ರಜನೀಕಾಂತ ರೈತರಿಗೆ ಸಲಹೆ ನೀಡಿದರು.

ಮೊಳಕಾಲ್ಮೂರು ತಾಲ್ಲೂಕಿನ ರಾಂಪುರ ರೈತ ಸಂಪರ್ಕ ಕೇಂದ್ರದ ಆವರಣದಲ್ಲಿ ಈಚೆಗೆ ಬಬ್ಬೂರು ಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರ ವತಿಯಿಂದ ರೈತಭಾಂದವರಿಗೆ ಬಿಜೋಪಚಾರ ಮತ್ತು ಸುರಕ್ಷಿತ ಪೀಡೆನಾಶಕ ಬಳಕೆ ಕುರಿತು ಪ್ರಾತ್ಯಕ್ಷಿಕೆ ಮಾಡುವ ಮೂಲಕ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರೈತ ಬಾಂಧವರು ಕೀಟನಾಶಕ ಸಿಂಪರಣೆ ಮಾಡುವಾಗ ಯಾವಾಗಲೂ ಕನ್ನಡಕ, ಮುಖವಾಡ, ಕೈ ಹೊದಿಕೆ ಮತ್ತು ಸರಿಯಾದ ಬಟ್ಟೆಗಳನ್ನು ಧರಿಸಬೇಕು. ಸಿಂಪರಣೆಯ ನಂತರ ಸಾಬೂನಿನಿಂದ ಸ್ನಾನ ಮಾಡಿ ಬಟ್ಟೆಯನ್ನು ಬದಲಾಯಿಸಬೇಕು. ಸಿಂಪರಣಾ ಸಮಯದಲ್ಲಿ ಎಲೆ-ಅಡಿಕೆ ಜಗಿಯಬಾರದು ಮತ್ತು ಧೂಮಪಾನ ಮಾಡಬಾರದು ಮತ್ತು ತೊಂದರೆ ಉಂಟಾದಲ್ಲಿ ಸಿಂಪಡಿಸುವುದನ್ನು ನಿಲ್ಲಿಸಿ ವೈದ್ಯರ ಸಲಹೆ ಪಡೆಯಬೇಕು ಎಂದರು. ನಂತರ ಶೇಂಗಾ ಮತ್ತು ತೊಗರಿ ಬೆಳೆಯಲ್ಲಿ ಅನುಸರಿಸಬೇಕಾದ ಬಿಜೋಪಚಾರದ ಕ್ರಮಗಳ ಕುರಿತು ಪ್ರಾತ್ಯಕ್ಷಿಕೆಯ ಮೂಲಕ ರೈತರಿಗೆ ಮನದಟ್ಟು ಮಾಡಿದರು.

ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ. ಓಂಕಾರಪ್ಪ ಅವರು ಶೇಂಗಾ, ತೊಗರಿ, ಮೆಣಸಿನಕಾಯಿ, ತೆಂಗು ಮತ್ತು ಅಡಿಕೆ ಬೆಳೆಯ ಪ್ರಮುಖ ರೋಗ ಮತ್ತು ಕೀಟಗಳ ನಿರ್ವಹಣೆ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿಮೊಳಕಾಲ್ಮೂರುತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕ ಎನ್.ವಿ ಪ್ರಕಾಶ್, ಕೃಷಿ ಅಧಿಕಾರಿ ಸಿಕಂದರ್ ಭಾಷ, ಪ್ರಗತಿಪರ ರೈತ ವಿರೂಪಾಕ್ಷಪ್ಪ, ತಾಲ್ಲೂಕು ಕೃಷಿಕ ಸಮಾಜದ ಅಧ್ಯಕ್ಷ ಹನುಮಂತರೆಡ್ಡಿ, ಆತ್ಮ ಸಿಬ್ಬಂದಿಯಾದ ನಿರಂಜನ್ ಮತ್ತು ಶಿವಣ್ಣ ಇದ್ದರು.

## ಪತ್ರಿಕಾ ಭವನದ ನೀರಿನ ಸಮಸ್ಯೆ ಪರಿಹರಿಸಿದ: ಡಿಸಿ ಟಿ.ವೆಂಕಟೇಶ್



» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಹಿಂಭಾಗದಲ್ಲಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮತ್ತು ಪತ್ರಕರ್ತರ ಭವನದ ಬಳಿ ನೂತನವಾಗಿ ಕೊರೆಯಲಾದ ಕೊಳವೆಬಾವಿಗೆ ಜಿಲ್ಲಾಧಿಕಾರಿಗಳಾದ ವೆಂಕಟೇಶ್ ರವರು ಮಂಗಳವಾರ ಚಾಲನೆ ನೀಡಿದರು.

ಈ ಭಾಗದಲ್ಲಿ ನೀರಿನ ಕೊರತೆಯ ಸಮಸ್ಯೆ ಬಗ್ಗೆ ಮನವರಿಕೆ ಮಾಡಿಕೊಟ್ಟ ಪತ್ರಕರ್ತರ ಮನವಿಗೆ ಸ್ಪಂದಿಸಿದ ಜಿಲ್ಲಾಧಿಕಾರಿಗಳು ತಾವೇ ಮುಂದೆನಿಂತು ಪೂಜೆ ಸಲ್ಲಿಸಿ,ಇಲ್ಲಿ ಕೊಳವೆಬಾವಿ ಕೊರೆಸಲಾಗಿತ್ತು. ಸುಮಾರು 350 ಅಡಿ ಆಳ ಹೋಗಿದ್ದು ಇದರಲ್ಲಿ 2 ಇಂಚು ನೀರಿನ ಜಲಸಿಕ್ಕಿದೆ. ಈ ಕೊಳವೆಬಾವಿಯಿಂದ ಪತ್ರಕರ್ತರ ಭವನದ, ನೀರಿನ ಸಮಸ್ಯೆ ಪರಿಹಾರವಾದಂತೆ ಆಗಿದೆ. ಈ ಸಂದರ್ಭದಲ್ಲಿ ಜಿ.ಪಂ.ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಸೋಮಶೇಖರ್, ಅಪರ ಜಿಲ್ಲಾಧಿಕಾರಿಗಳಾದ ಕುಮಾರಸ್ವಾಮಿ, ಪೌರಾಯುಕ್ತರಾದ ಶ್ರೀಮತಿ ರೇಣುಕಾ, ವಾರ್ತಾಧಿಕಾರಿ ತುಕರಾಂ, ಪತ್ರಕರ್ತರ ಸಂಘದ ಅಧ್ಯಕ್ಷರಾದ ಬಿ.ದಿನೇಶ್ ಗೌಡಗೆರೆ, ಹಿರಿಯ ಪತ್ರಕರ್ತರಾದ ಚಿಕ್ಕಪ್ಪನಹಳ್ಳಿ ಷಣ್ಮುಖ, ಮಾಧ್ಯಮ ಅಕಾಡೆಮಿ ಸದಸ್ಯ ಎಂ.ಎನ್. ಅಹೋಬಳಪತಿ, ರಾಷ್ಟ್ರೀಯ ಮಂಡಳಿ ಸದಸ್ಯ ಸಿ.ಹೆಚ್. ಹಂಜಾರಪ್ಪ, ಉಪಾಧ್ಯಕ್ಷರಾದ ನಾಕೀಕೆರೆ ತಿಪ್ಪೇಸ್ವಾಮಿ, ಕಾರ್ಯದರ್ಶಿಗಳಾದ ವಿ.ವೀರೇಶ್ (ಅಪ್ಪು),ವಿನಾಯಕಬಿ.ಎಸ್.

ಖಜಾಂಚಿ,ಡಿ.ಕುಮಾರಸ್ವಾಮಿ.ಬಿ.ಎಸ್, ಜಿಲ್ಲಾಕಾರ್ಯಕಾರಿ ಸಮಿತಿ ಸದಸ್ಯರಾದ ಗೌನಹಳ್ಳಿ ಗೋವಿಂದಪ್ಪ, ಬಿ.ಆರ್. ನಾಗೇಶ್, ರಾಜಶೇಖರ. ಸಿ,ಶಿವರಾಜ್.ಆರ್,ರಾಘವೇಂದ್ರ, ವೆಂಟಾಚಲಪತಿ,ಆನಂದ್, ಸಂಘದ ಪದಾಧಿಕಾರಿಗಳು ಸೇರಿದಂತೆ ವಾರ್ತಾ ಇಲಾಖೆಯ ಸಿಬ್ಬಂದಿ ವರ್ಗ ಹಾಜರಿದ್ದರು

# ದಲ್ಲಾಲರ ಸಂಘದ ವತಿಯಿಂದ ಸೂಜಿಮಲ್ಲೇಶ್ವರಸ್ವಾಮಿಗೆ ವಿಶೇಷ ಪೂಜೆ

» **ಚಳ್ಳಕೆರೆ**



ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಆವರಣದಲ್ಲಿರುವ ದಲ್ಲಾಲರ ಸಂಘದ ವತಿಯಿಂದ ಶ್ರಾವಣ ಮಾಸದ ಹಿನ್ನೆಲೆಯಲ್ಲಿ ಮಳೆಗಾಗಿ ಪ್ರಾರ್ಥಿಸಿ ಸೂಜಿಮಲ್ಲೇಶ್ವರಸ್ವಾಮಿ ಸನ್ನಿಧಿಯಲ್ಲಿ ರುದ್ರಾಭಿಷೇಕ ಕಾರ್ಯಕ್ರಮವನ್ನು ಹಮ್ಮಿಕೊಂಡು ಉತ್ತಮ ಮಳೆ, ಬೆಳೆಗಾಗಿ ಪ್ರಾರ್ಥಿಸಲಾಯಿತು ಎಂದು ದಲ್ಲಾಲರ ಸಂಘದ ಅಧ್ಯಕ್ಷ ಕೆ.ಎಂ.ಅರವಿಂದ್ ತಿಳಿಸಿದರು.

ಅವರು, ಈ ಬಗ್ಗೆ ಮಾಹಿತಿ ನೀಡಿ, ದಲ್ಲಾಲರ ಸಂಘ ಪ್ರತಿವರ್ಷವೂ ವರುಣನ ಕೃಪೆಯಾಗಿ ದೇವರ ಸನ್ನಿಧಿಯಲ್ಲಿ ರುದ್ರಾಭಿಷೇಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಾ ಬಂದಿದೆ. ಪ್ರಸ್ತುತ ಈ ವರ್ಷವೂ ಸಹ ನಿರೀಕ್ಷಿತಪ್ರಮಾಣದಲ್ಲಿ ಮಳೆಯಾಗಿಲ್ಲ. ಇದರಿಂದ ರೈತರು ಆತಂಕಕ್ಕೆ ಒಳಗಾಗಿದ್ದಾರೆ, ಆದ್ದರಿಂದ ಪೂಜೆಯ ಮೂಲಕ ಶ್ರೀಸ್ವಾಮಿಗೆ ಮಳೆಗಾಗಿ ಪ್ರಾರ್ಥನೆ ಸಲ್ಲಿಸಲಾಗಿದೆ ಎಂದರು.

ಸಂಘದ ಉಪಾಧ್ಯಕ್ಷ ಡಿ.ಎಂ.ತಿಪ್ಪೇಸ್ವಾಮಿ ಮಾತನಾಡಿ, ಇಲ್ಲಿನ ಕೃಷಿ ಉತ್ಪನ್ನ ಮಾರುಕಟ್ಟೆ ಹಾಗೂ ದಲ್ಲಾಲರ ಸಂಘ ರೈತರ ನೆರವಿಗಾಗಿ ಸದಾಕಾಲ ಕಾರ್ಯನಿರ್ವಹಿಸುತ್ತಾ ಬಂದಿದೆ. ನೆರೆಯ ಆಂಧ್ರಪ್ರದೇಶವೂ ಸೇರಿದಂತೆ ವಿವಿಧೆಡೆಗಳಿಂದ ರೈತರು ಇಲ್ಲಿನ ಮಾರುಕಟ್ಟೆಗೆ ಆಗಮಿಸುತ್ತಾರೆ.

## ಪ್ರಮುಖ ಸುದ್ದಿ

### ಶಾಸಕ ಎನ್.ವೈ.ಗೋಪಾಲಕೃಷ್ಣ ಸೇರಿದಂತೆ ಹಲವಾರು ಗಣ್ಯರು ಬಾಗಿ.

# ಇಂದು ಬುರುಜುಮಾರಮ್ಮ ದೇವಸ್ಥಾನ ಗೋಪುರ, ಕಳಸ ಸ್ಥಾಪನೆ

» **ಚಳ್ಳಕೆರೆ**



ತಾಲ್ಲೂಕಿನ ತಳಕು ಹೋಬಳಿಯ ಘಟಪರ್ತಿ ಗ್ರಾಮದಲ್ಲಿ ಶ್ರೀಬುರುಜು ಮಾರಮ್ಮ ದೇವಸ್ಥಾನ ಕಳಸಪ್ರತಿಷ್ಠಾಪನಾ ಕಾರ್ಯಕ್ರಮ ಆ.7ರ ಬುಧವಾರ 11ಕ್ಕೆ ನಡೆಯಲಿದೆ ಎಂದು ದೇವಸ್ಥಾನದ ಆಡಳಿತ ಮಂಡಳಿ ತಿಳಿಸಿದೆ.

ಈ ಬಗ್ಗೆ ಮಾಹಿತಿ ನೀಡಿದ ಆಡಳಿತ ಮಂಡಳಿ ನಿರ್ದೇಶಕರು ಕಳಸ ಪ್ರತಿಷ್ಠಾಪನಾ ಕಾರ್ಯಕ್ರಮದಲ್ಲಿ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ, ಸಂಸದ ಗೋವಿಂದ ಎಂ.ಕಾರಜೋಳ, ದ್ರಾಕ್ಷಿ ಮತ್ತು ವೈನ್ ಬೋರ್ಡ್ ಅಧ್ಯಕ್ಷ ಡಾ.ಬಿ.ಯೋಗೇಶ್‌ಬಾಬು, ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮುಂತಾದವರು ಪಾಲ್ಗೊಳ್ಳುವರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಮ ಪಂಚಾಯಿತಿ ಅಧ್ಯಕ್ಷೆ ದುರುಗಮ್ಮಬಾಬು ವಹಿಸುವರು, ಉಪಾಧ್ಯಕ್ಷೆ ಮಂಜಮ್ಮ, ಸದಸ್ಯರಾದ ವೀರಭದ್ರಪ್ಪ, ನಿರಂಜನಗೌಡ್ರು, ಓಬಕ್ಕ, ಕೆ.ಬಿ.ರವಿಕುಮಾರ್, ಎಸ್.ಟಿ.ಮಂಜುನಾಥ, ಕಾಮಾಕ್ಷಿ, ಗೌರಮ್ಮ, ಪುಟ್ಟಮ್ಮ ಮುಂತಾದವರು ಪಾಲ್ಗೊಳ್ಳುವರು. ದೇವಸ್ಥಾನದ ಪೂಜಾ ಕಾರ್ಯಕ್ರಮಗಳನ್ನು ಬೆಂಗಳೂರಿನ ವೇದಬ್ರಹ್ಮ ವಿನಾಯಕಭಟ್ ಹಾಗೂ ಬಳಗ ನಡೆಸಿಕೊಡಲಿದೆ. ಹೋಮಪೂಜೆ, ಗಣಪತಿಪೂಜೆ, ಸಂಕಲ್ಪ, ಕಳಸಸ್ಥಾಪನೆ, ಸುದರ್ಶನಹೋಮ, ವಾಸ್ತುಹೋಮ, ನಕ್ಷತ್ರಹೋಮ ಮುಂತಾದ ಕಾರ್ಯಕ್ರಮಗಳನ್ನು ನಡೆಸಲಾಗುವುದು. ಗ್ರಾಮದ ಮುಖಂಡರಾದ ಜಿ.ಆರ್. ಚಿದಂಬರ, ಜಿ.ಆರ್.ಕೋಟಿಪ್ರಕಾಶ್, ಜಿ.ಪಿ.ನವೀನ್ ಸೇರಿದಂತೆ ಹಲವಾರು ಮುಖಂಡರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಅಂದು ರಾತ್ರಿ 8.30ಕ್ಕೆ ರಂಗಚೇಳು ಕಲಾವಿದರಿಂದ ವೀರಬ್ರಹೇಂದ್ರಸ್ವಾಮಿ ಪೌರಾಣಿಕನಾಟಕ ಹಮ್ಮಿಕೊಳ್ಳಲಾಗಿದೆ. ದೇವಸ್ಥಾನದ ಕಳಸ ಪ್ರತಿಷ್ಠಾಪನೆ ಹಾಗೂ ಎಲ್ಲಾ ಕಾರ್ಯಕ್ರಮಗಳಿಗೆ ಭಕ್ತರು ಸಕಾಲದಲ್ಲಿ ಆಗಮಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗುವಂತೆ ಮನವಿ ಮಾಡಲಾಗಿದೆ.

## ಫಾಸ್ಟ್ ನ್ಯೂಸ್

### 10ರಂದು ಜೈವಿಕ ಇಂಧನ, ಸೌರಶಕ್ತಿ ವಿಚಾರ ಸಂಕಿರಣ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಆಗಸ್ಟ್ 10ರಂದು ಬೆಳಿಗ್ಗೆ 10ಕ್ಕೆ ಅಂತರಾಷ್ಟ್ರೀಯ ಜೈವಿಕ ಇಂಧನ ದಿನಾಚರಣೆ ಅಂಗವಾಗಿ ಜಿಲ್ಲೆಯ ರೈತರಿಗೆ ಜೈವಿಕ ಇಂಧನ ಹಾಗೂ ಸೌರಶಕ್ತಿ ಕುರಿತು ಒಂದು ದಿನದ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ. ಚಿತ್ರದುರ್ಗ ಜೆಎಂಐಟಿ ಕಾಲೇಜಿನ ಜೈವಿಕ ಇಂಧನ ಸಂಶೋಧನಾ ಮಾಹಿತಿ ಮತ್ತು ಪ್ರಾತ್ಯಕ್ಷಿಕ ಕೇಂದ್ರ, ಸೆಲ್ಕೋ ಸೋಲಾರ್ ಹಾಗೂ ಬೆಂಗಳೂರಿನ ಸೆಲ್ಕೋ ಫೌಂಡೇಷನ್ ಸಹಯೋಗದಲ್ಲಿ ಕಾರ್ಯಗಾರ ಆಯೋಜಿಸಲಾಗಿದ್ದು, ಕಾರ್ಯಗಾರದಲ್ಲಿ ಜೆಎಂಐಟಿ ಕಾಲೇಜಿನ ಜೈವಿಕ ಇಂಧನ ಸಂಶೋಧನಾ, ಮಾಹಿತಿ ಮತ್ತು ಪ್ರಾತ್ಯಕ್ಷಿಕ ಕೇಂದ್ರದ ಮುಖ್ಯ ಸಂಯೋಜಕ ಡಾ.ರಾಜೇಶ್, ತಾಂತ್ರಿಕ ಅಧಿಕಾರಿ ಬಿ.ಕೆ.ಸುನೀಲ್ ಕುಮಾರ್ ಅವರು ಜೈವಿಕ ಇಂಧನ–ಪರಿಸರ ಸ್ನೇಹಿ (ಡಿಸೇಲ್& ಪೆಟ್ರೋಲ್‌ಗೆ ಪರ್ಯಾಯ ಇಂಧನ) ಕುರಿತು ವಿಷಯ ಮಂಡನೆ ಮಾಡುವರು.ಸೆಲ್ಕೋ ಸೋಲಾರ್‌ನ ವಲಯ ವ್ಯವಸ್ಥಾಪಕ ಮಂಜುನಾಥ ಭಾಗವತ್ ಹಾಗೂ ಸೆಲ್ಕೋ ಫೌಂಡೇಷನ್‌ನ ತಿಪ್ಪೇಶ್ ಅವರು ಸೌರಶಕ್ತಿ ಆಧಾರಿತ ಜೀವನೋಪಾಯ ಚಟುವಟಿಕೆ ಹಾಗೂ ಪ್ರಧಾನಮಂತ್ರಿ ಸೂರ್ಯಘರ್ ಯೋಜನೆ ಕುರಿತು ಮಾಹಿತಿ ನೀಡುವರುವಿಜಯನಗರ ಜಿಲ್ಲೆ ಕೂಡ್ಲಿಗಿ ತಾಲ್ಲೂಕಿನ ಹುಲಿಕೆರೆಯ ಪ್ರಗತಿಪರ ಕೃಷಿಕ ಹೆಚ್.ವಿ.ಸಜ್ಜನ್ ಅವರು ರೈತರಿಗೆ ತಾವು ಮಾಡುತ್ತಿರುವ ವೈವಿದ್ಯಮಯ ಕೃಷಿ, ಹೈನುಗಾರಿಕೆ, ಎಣ್ಣೆಗಾಣ ಮತ್ತಿತರ 30ಕ್ಕೂ ಹೆಚ್ಚು ಮೌಲ್ಯಾಧಾರಿತ ಉತ್ಪನ್ನಗಳ ಕುರಿತು ಅನುಭವವನ್ನು ಹಂಚಿಕೊಳ್ಳುವರು. ನಂತರ ಸೌರಶಕ್ತಿ ಉಪಕರಣ ಬಳಸಿ ಯಶಸ್ವಿ ವಿಶೇಷಚೇತನ ಚಿಪ್ಸ್ ಉದ್ದಿಮೆದಾರ ಚಿತ್ರದುರ್ಗದ ಮಾನಂಗಿಯ ಕುಮಾರ್‌ಸ್ವಾಮಿ ಮತ್ತು ಡಿ.ಎಸ್.ಹಳ್ಳಿಯ ರೊಟ್ಟಿಉದ್ಯಮೆದಾರರಾದ ಎನ್. ಕೆ. ಪದ್ಮಾಕ್ಷಿ ಮತ್ತು ಇತರೆ ಯಶಸ್ವಿ ಉದ್ದಿಮೆದಾರರು ತಮ್ಮ ಅನುಭವ ಹಂಚಿಕೊಳ್ಳುವರು.ಆಸಕ್ತ 70ಜನ ರೈತಭಾಂದವರು ಕಾರ್ಯಗಾರದಲ್ಲಿ ಭಾಗವಹಿಸಲು ದೂರವಾಣಿ ಸಂಖ್ಯೆ 8277931058, 9845249832 ಮತ್ತು 9535412286 ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕ ಆರ್. ಆರ್.ರಜನೀಕಾಂತ ಕೋರಿದ್ದಾರೆ. ಮೊದಲು ನೋಂದಾವಣಿ ಮಾಡಿಕೊಂಡ 70 ಜನ ರೈತಭಾಂದವರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು ಹಾಗೂ ತರಬೇತಿಗೆ ಹಾಜರಾಗುವ ರೈತ ಬಾಂಧವರು ಕಡ್ಡಾಯವಾಗಿ ತಮ್ಮ ಎಫ್‌ಐಡಿ ಕಾರ್ಡ್ ಅಥವಾ ಚುನಾವಣಾ ಗುರುತಿನ ಚೀಟಿ ತರಬೇಕು.

### ಕಣಿವೆಮಾರಮ್ಮಗೆ ವಿಶೇಷ ಅಲಂಕಾರ



» **ಚಿತ್ರದುರ್ಗ**

ನಗರ ಪೊಲೀಸ್ ಠಾಣೆ ಆವರಣದಲ್ಲಿರುವ ಕಣಿವೆಮಾರಮ್ಮನಿಗೆ ಶ್ರಾವಣ ಮಾಸದ ಮೊದಲನೆ ಮಂಗಳವಾರದಂದು ವಿಶೇಷವಾಗಿ ಅಲಂಕರಿಸಲಾಗಿತ್ತು. ಬಗೆ ಬಗೆಯ ಹೂವು, ಹಾರ ಹಾಗೂ ಹಸಿರು ಪತ್ರೆಯಿಂದ ಸಿಂಗರಿಸಿ ಪೂಜಿಸಲಾಯಿತು. ಶ್ರಾವಣ ಮಾಸದ ಪ್ರಯುಕ್ತ ಬೆಳಗಿನಿಂದ ಸಂಜೆಯತನಕ ನೂರಾರು ಭಕ್ತರು ಧಾವಿಸಿ ಕಣಿವೆಮಾರಮ್ಮನಿಗೆ ಶ್ರದ್ಧಾ ಭಕ್ತಿಯನ್ನು ಸಮರ್ಪಿಸಿದರು.

### ಅಸಹಾಯಕರ ಮನೆ ಬಾಗಿಲಿಗೆ ಮಶಾಸನ

» **ಹೊಸದುರ್ಗ**

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾ ಕಛೇರಿ ಹೊಸದುರ್ಗ ವತಿಯಿಂದ ಮತ್ತೋಡು ಹೋಬಳಿಯ ಕಾರೇಹಳ್ಳಿ ಗ್ರಾಮದ ದೇವಿರಮ್ಮ ರವರಿಗೆ ಧರ್ಮಸ್ಥಳ ಸಂಸ್ಥೆಯಿಂದ ಮಾಶಾಸನ ವಿತರಣೆ ಮಾಡಿ ಯೋಜನಾಧಿಕಾರಿ ಶಿವಣ್ಣ ಮಾತನಾಡುತ್ತ, ಅಸಾಹಯಕರು ಧೈರ್ಯ ಕಳೆದುಕೊಳ್ಳದೆ ಆತ್ಮಸ್ಥೈರ್ಯದಿಂದ ಬದುಕಬೇಕು. ಅಸಹಾಯಕರು ಜೀವಂತ ಇರುವರೆಗೂ ಧರ್ಮಸ್ಥಳ ಸಂಸ್ಥೆ ಸಹಾಯಕ್ಕೆ ಬರುತ್ತದೆ ಎಂದು ತಿಳಿಸಿದರು. ಹೊಸದುರ್ಗ ತಾಲ್ಲೂಕಿನಲ್ಲಿ ಒಟ್ಟು 176 ಅಸಹಾಯಕರಿಗೆ ಪ್ರತಿ ತಿಂಗಳು ತಲಾ 1000 ರೂ ರಂತೆ ಒಟ್ಟು. ವಾರ್ಷಿಕ 21,12,000 ಇಷ್ಟು ಮೊತ್ತವನ್ನು ಅಸಹಾಯಕರಿಗೆ ಕಾರ್ಯಕರ್ತರ ಮೂಲಕ ಮನೆ ಬಾಗಿಲಿಗೆ ಪ್ರತಿ ತಿಂಗಳು ನೀಡಲಾಗಿತ್ತಿದೆ.ಅಲ್ಲದೇ ಪೌಷ್ಠಿಕ ಆಹಾರದ ಕಿಟ್ಟನ್ನು ಧರ್ಮಸ್ಥಳದಿಂದ ಪ್ರತಿ ತಿಂಗಳು ಅಸಹಾಯಕರಿಗೆ ನೀಡುತ್ತಿದ್ದು ಅವರಿಗೆ ಯಾರಿಲ್ಲ ಎಂಬ ಕೊರಗು ಬರದ ಹಾಗೇ ಧರ್ಮಸ್ಥಳ ಸಂಸ್ಥೆ ನೋಡಿಕೊಳ್ಳುತ್ತಿದೆ ಎಂದು ತಿಳಿಸಿದರು.

ಶಾಂತಿ ಮತ್ತು ಸೌಹಾರ್ದತೆಯ ಸಂಕೇತವಾಗಿ ಗಣೇಶ ಉತ್ಸವ ಆಚರಣೆ: ಷಡಾಕ್ಷರಪ್ಪ

# ಹಿಂದೂಮಹಾಗಣಪತಿ ಯಶಸ್ವಿಗಾಗಿ ಕೈಜೋಡಿಸಿ

» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ನಾಡಿನ ಕಲ್ಯಾಣವನ್ನು ಬಯಸಿ ಪ್ರತಿಯೊಬ್ಬರಲ್ಲೂ ಸಾಮರಸ್ಯ, ಶಾಂತಿಯಿಂದ ಬದುಕನ್ನು ಸುಗಮವಾಗಿ ನಡೆಸುವ ನಿಟ್ಟಿನಲ್ಲಿ ಶ್ರೀವಿಘ್ನೇಶನನ್ನು ಪ್ರಾರ್ಥಿಸಿ ಮುನ್ನಡೆಯಬೇಕಿದೆ. ಗಣಪತಿಯ ಪ್ರಾರ್ಥನೆಯಿಂದ ನಮ್ಮೆಲ್ಲರ ಸಂಕಷ್ಟಗಳು ದೂರವಾಗುತ್ತವೆ. ಪ್ರತಿಯೊಬ್ಬರೂ ಭಕ್ತಿಶ್ರದ್ದೆಯಿಂದ ಹಿಂದೂಮಹಾಗಣಪತಿ ಉತ್ಸವದಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ವಿಶ್ವಹಿಂದೂಪರಿಷತ್ ಜಿಲ್ಲಾಧ್ಯಕ್ಷ ಕೊಂಡ್ಲಹಳ್ಳಿ ಷಡಾಕ್ಷರಪ್ಪ ತಿಳಿಸಿದರು.

ಅವರು, ರೋಟರಿ ಬಾಲಭವನದಲ್ಲಿ ಬರುವ ಸೆ.7ರಿಂದ ಹಿಂದೂಮಹಾಗಣಪತಿ ಉತ್ಸವ ಆಚರಿಸುವ ಹಿನ್ನೆಲೆಯಲ್ಲಿ ವಿಶ್ವಹಿಂದೂಪರಿಷತ್ ಹಾಗೂ ಇತರೆ ಸಂಘಟನೆಗಳು ಹಮ್ಮಿಕೊಂಡಿದ್ದ ಉತ್ಸವ



ಸಮಿತಿಯ ಪೂರ್ವಬಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಮಾಜ ಸಂಘಟನೆಯೊಂದಿಗೆ ಶಾಂತಿಯನ್ನು ನೆಲಸುವ ನಿಟ್ಟಿನಲ್ಲಿ ನಾವೆಲ್ಲರೂ ಕಾರ್ಯನಿರ್ವಹಿಸಬೇಕಿದೆ. ಸಂಸ್ಕೃತಿ ಮತ್ತು ಸಂಸ್ಕಾರವನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಹಿಂದೂಮಹಾಗಣಪತಿ ಉತ್ಸವ ಎಲ್ಲರಿಗೂ ಹೊಸ ಶಕ್ತಿ ಉತ್ಸಾಹ ನೀಡಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದರು.

ಎಲ್ಲರನ್ನೂ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ವಿಶ್ವಹಿಂದೂಪರಿಷತ್ ತಾಲ್ಲೂಕು ಅಧ್ಯಕ್ಷ ಡಾ.ಡಿ.ಎನ್. ಮಂಜುನಾಥ, ಗಣೇಶನ ಉತ್ಸವದ ಆಚರಣೆ ನಮ್ಮಲ್ಲರಿಗೂ ಹೆಚ್ಚು ಆತ್ಮವಿಶ್ವಾಸವನ್ನು ತುಂಬಲಿದೆ. ಪ್ರಸ್ತುತ ಇಂದಿನ ದಿನಮಾನದಲ್ಲಿ ಶ್ರೀಗಣೇಶನ ಉತ್ಸವ ಆಚರಣೆ ಎಲ್ಲರಲ್ಲೂ ಕ್ರಿಯಾಶೀಲತೆಯನ್ನು ತುಂಬಬೇಕಿದೆ. ಕಾರ್ಯಕ್ರಮ ಯಶಸ್ವಿಗೆ ಎಲ್ಲಾ ಸಂಘ ಸಂಸ್ಥೆಗಳು, ಉತ್ಸವ ಸಮಿತಿಯೊಂದಿಗೆ ಕೈಜೋಡಿಸಬೇಕು ಎಂದರು.

ಗಣೇಶ ಉತ್ಸವದ ಆಚರಣಾ ಸಮಿತಿಯ ಗೌರವಾಧ್ಯಕ್ಷರಾಗಿ ಖ್ಯಾತಜ್ಯೋತಿಷಿ ಡಾ.ಅನಂತರಾಮಗೌತಮ್, ಅಧ್ಯಕ್ಷರಾಗಿ ಕೆ.ಸಿ.ನಾಗರಾಜು, ಶೋಭಾಯಾತ್ರೆಯ ಗೌರವಾಧ್ಯಕ್ಷರಾಗಿ ಬಿ.ಎಸ್.ಶಿವಪುತ್ರಪ್ಪ, ಅಧ್ಯಕ್ಷರಾಗಿ ಪಿ.ತಿಪ್ಪೇಸ್ವಾಮಿ(ಪಿಟಿ) ಇವರನ್ನು ಆಯ್ಕೆ ಮಾಡಲಾಯಿತು.

ಪೂರ್ವಬಾವಿ ಸಭೆಯಲ್ಲಿ ನಗರ ಘಟಕದ ಅಧ್ಯಕ್ಷ ಕೆ.ಎಂ.ಯತೀಶ್, ಭಜರಂಗದಳದ ಬಾಲಕೃಷ್ಣ, ಉಮೇಶ್, ಲಕ್ಷ್ಮಿಶ್ರೀವತ್ಸ, ಸಿದ್ದೇಶ್ ಮುಂತಾದವರು ಪಾಲ್ಗೊಂಡಿದ್ದರು.

# ಸರಣಿ ಭ್ರಷ್ಟಾಚಾರದಲ್ಲಿ ಸಿದ್ದು ಸರ್ಕಾರ

» **ಚಿತ್ರದುರ್ಗ**




ಸರಣಿ ಭ್ರಷ್ಟಾಚಾರದಲ್ಲಿ ಸಿದ್ಧರಾಮಯ್ಯ ಸರ್ಕಾರ ಸಿಲುಕಿದೆ ಎಸ್‌ಐಟಿ, ಸಿಐಡಿ ಮೇಲೆ ಜನ ನಂಬಿಕೆ ಕಳೆದುಕೊಂಡಿದ್ದಾರೆ ರಾಜಕಾರಣಿಗಳಿಗೆ ಜನ ಅಟ್ಟಿಸಿಕೊಂಡು ಬರುವ ಸ್ಥಿತಿ ಬರುತ್ತದೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ತಿಳಿಸಿದ್ದಾರೆ.

ನಗರದ ಕ್ಯಾದಿಗೆರೆ ಸಮೀಪ ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಆಡಳಿತ ಸರಿಯಿದ್ದರೆ ಹೀಗಾಗುತ್ತಿರಲಿಲ್ಲ. ಶಾಸಕರಿಗೆ ಅಭಿವೃದ್ಧಿಗೆ 1 ರೂಪಾಯಿ ಕೊಟ್ಟಿಲ್ಲ. ಶಾಸಕರು ಅಧಿಕಾರಿಗಳನ್ನು ಹಿಡಿದುಕೊಳ್ಳುವ ಸ್ಥಿತಿ ನಿರ್ಮಾಣ ಶಾಸಕರು ಅಧಿಕಾರಿಗಳನ್ನು ಟಾರ್ಗೆಟ್ ಮಾಡುತ್ತಿದ್ದಾರೆ. ಸಿದ್ದರಾಮಯ್ಯರಂತ ಕೆಟ್ಟ ಸರ್ಕಾರ ಯಾವುದೂ ಇಲ್ಲ. ತಮ್ಮ ಕಣಜ ತುಂಬಿಕೊಳ್ಳುವದರ ಬಗ್ಗೆ ಯೋಚಿಸುತ್ತಿದ್ದಾರೆ ಎಂದು ಆರೋಪಿಸಿದರು.

ಸರಣಿ ಭ್ರಷ್ಟಾಚಾರದಲ್ಲಿ ಸಿದ್ಧರಾಮಯ್ಯ ಸರ್ಕಾರ ಸಿಲುಕಿದೆ ಎಸ್‌ಐಟಿ, ಸಿಐಡಿ ಮೇಲೆ ಜನ ನಂಬಿಕೆ ಕಳೆದುಕೊಂಡಿದ್ದಾರೆ. ರಾಜಕಾರಣಿಗಳಿಗೆ ಜನ ಅಟ್ಟಿಸಿಕೊಂಡು ಬರುವ ಸ್ಥಿತಿ ಬರುತ್ತದೆ. ಎಸ್ಸಿಪಿ ಟಿಎಸ್‌ಪಿಗೆ ಮೀಸಲಿದ್ದ ದಲಿತರ ಹಣವನ್ನು ಸರ್ಕಾರ ಬಳಸಿದೆ ಸಿದ್ಧರಾಮಯ್ಯ ಸರ್ಕಾರ ಮೋಸ ವಂಚನೆಗೆ ಹೆಸರಾಗಿದೆ. ಸಿಎಂ ಸಿದ್ಧರಾಮಯ್ಯ, ಡಿಸಿಎಂ ಡಿಕೆಶಿ ಲೂಟಿಯಲ್ಲಿ ತೊಡಗಿ ಸಿಕ್ಕಿ ಹಾಕಿಕೊಂಡಿದ್ದಾರೆ. ಬಿಜೆಪಿ ಜೆಡಿಎಸ್ ಪಾದಯಾತ್ರೆ ಬಗ್ಗೆ ಯಾವುದೇ ಗೊಂದಲ ಇಲ್ಲ ಎಂದು ಉತ್ತರಿಸಿದರು.

ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಪರವಾಗಿ ಬಿಜೆಪಿ ಜೆಡಿಎಸ್ ಕುತಂತ್ರ ಮಾಡುತ್ತಿದ್ದಾರೆ ಮುಖ್ಯಮಂತ್ರಿ ಪದವಿ ಇಳಿಸುವುದಕ್ಕೆ ಎಂದು ರ‍್ಯಾಲಿ ಮಾಡಲಾಯಿತು ಎಂಬ ಪ್ರಶ್ನೆಗೆ ಉತ್ತರಿಸಿದ ಚಲವಾದಿ ನಾರಾಯಣಸ್ವಾಮಿ ಅವರು ಕುತಂತ್ರ ಮಾಡಿದವರು ಕಾಂಗ್ರೆಸ್ ಸರ್ಕಾರ ದಲಿತರಿಗೆ ಅಭಿವೃದ್ಧಿಗೆ ಬೇಕಾದ ಹಣ ದುರ್ಬಳಕೆ ಮಾಡಿಕೊಂಡಿದ್ದಾರೆ ಭೂಮಿ ಇಲ್ಲದವರು ಉಳಿಮೆ ಮಾಡಲು ಅರ್ಜಿ ಹಾಕಿದವರು ಭೂಮಿ ಕೊಡಲಿಲ್ಲ. ಈ ಸರ್ಕಾರ ಬದಲಿಗೆ ಇವರೇ ಭೂ ಸಹ ಮಾಡಿದ್ದಾರೆ ದಲಿತರು ಉದ್ಯಮಶೀಲತೆಗೆ ಕಾರುಗಳನ್ನು ತೆಗೆದುಕೊಳ್ಳುವ ಹಣದಲ್ಲಿ ಶಾಸಕರು ಕೋಟಿಗಟ್ಟಲೆ ಐಶುರಾಮಿ ಕಾರು ಖರೀದಿಸಿದ್ದಾರೆ. ಇದು ಕಾಂಗ್ರೆಸ್ ಸರ್ಕಾರ ಕುತಂತ್ರ ಮಾಡಿದರೆ ಸಿದ್ಧರಾಮಯ್ಯ ಸರ್ಕಾರ ಮೋಸ ವಂಚನೆಗೆ ಹೆಸರಾಗಿದೆ ಎಂದು ಆಕ್ರೋಶ ಹೊರ ಹಾಕಿದ್ದಾರೆ. ಈ ಸಂದರ್ಭದಲ್ಲಿ ಭಾಸ್ಕರ್ ನಿವೃತ್ತಿ ಐಪಿಎಸ್ ಪೊಲೀಸ್ ಸಂಘದ ಅಧ್ಯಕ್ಷ ಶಶಿಧರ್ ಬಿಜೆಪಿ ನಗರ ಅಧ್ಯಕ್ಷ ನವೀನ್ ಚಾಲುಕ್ಯ ಬಿಜೆಪಿ ಜಿಲ್ಲಾ ವಕ್ತಾರ ಛಲವಾದಿ ತಿಪ್ಪೇಸ್ವಾಮಿ ಜಗದೀಶ್ ಚಲವಾದಿ ವೆಂಕಟೇಶ್ ಸ್ವಾಮಿ ಇತರರು ಉಪಸಿತರಿದ್ದರು.

### ಪೊಲೀಸರಿಗೆ ರಕ್ಷಣೆ ಕೊಡುವ ಸ್ಥಿತಿ ನಿರ್ಮಾಣ: ಭಾಸ್ಕರ್ ರಾವ್ ಕಿಡಿ

» **ಚಿತ್ರದುರ್ಗ**



ಲೂಟಿ ಹೊಡೆಯಿರಿ ಎಂದು ಸರ್ಕಾರವೇ ಒತ್ತಡ ಹೇರುತ್ತಿದೆ. ಪೊಲೀಸ್ ಇಲಾಖೆ ಸಂಪೂರ್ಣ ವೀಕ್ ಆಗುತ್ತಿದೆ. ಪೊಲೀಸರಿಗೆ ರಕ್ಷಣೆ ಕೊಡುವ ಸ್ಥಿತಿ ನಿರ್ಮಾಣ ಆಗಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ನಿವೃತ್ತ ಪೊಲೀಸ್ ಅಧಿಕಾರಿ ಭಾಸ್ಕರ್ ರಾವ್ ಕಿಡಿಕಾರಿದ್ದಾರೆ.

ಕ್ಯಾದಿಗೆರೆ ಸಮೀಪ ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ರಕ್ಷಕರನ್ನು ಭಕ್ಷಕರನ್ನಾಗಿ ಮಾಡಿದೆ. ಲಕ್ಷಾಂತರ ರೂ. ಕೊಡುವವರೆಗೂ ಪೋಸ್ಟಿಂಗ್ ಕೊಡುವುದಿಲ್ಲ. ಸಮವಸ್ತ್ರಧಾರಿಗಳು ಭಕ್ಷಕರು ಮಾತ್ರವಲ್ಲ ಭೀಕಾರಿಗಳಾಗಿದ್ದಾರೆ. ನೇರವಾಗಿ ಜನರ ಮೇಲೆ ಪರಿಣಾಮ ಬೀರುತಿದೆ ಎಂದರು.ಬೇರೆ ಇಲಾಖೆಗಳಲ್ಲಿ ಗುತ್ತಿಗೆ, ಟೆಂಡರ್, ಪರ್ಸೆಂಟೇಜ್ ನಡೆಯುತ್ತದೆ. ಪೊಲೀಸರು ಜನಸಾಮಾನ್ಯರಿಂದ ವಸೂಲಿ ಮಾಡಬೇಕಾಗುತ್ತದೆ. ಲೂಟಿ ಹೊಡೆಯಿರಿ ಎಂದು ಸರ್ಕಾರವೇ ಒತ್ತಡ ಹೇರುತ್ತಿದೆ.

ಪೊಲೀಸ್ ಇಲಾಖೆ ಸಂಪೂರ್ಣ ವೀಕ್ ಆಗುತ್ತಿದೆ. ಪೊಲೀಸರಿಗೆ ರಕ್ಷಣೆ ಕೊಡುವ ಸ್ಥಿತಿ ನಿರ್ಮಾಣ ಆಗಿದೆ ಪ್ರಾಮಣಿಕತೆ ಇರುವುದರಿಂದ ಪರಶುರಾಮ್ ಆತ್ಮಹತ್ಯೆ ಬೆಂಗಳೂರಲ್ಲಿ ಪೊಲೀಸ್ ಠಾಣೆಗೆ ಪೋಸ್ಟಿಂಗ್ ಪಡೆಯಲು ಕೋಟಿಗಟ್ಟಲೆ ಹಣ ಕೊಡಬೇಕು ಎಂದು ದೂರಿದರು.ಜಿಲ್ಲೆಗಳಲ್ಲಿ ಲಕ್ಷಾಂತರ ರೂಪಾಯಿ ಹಣ ಕೊಡಬೇಕಿದೆಜನಪ್ರತಿನಿಧಿಗಳು, ಹೋಂ ಮಿನಿಸ್ಟರ್, ಚೀಫ್ ಮಿನಿಸ್ಟರ್ ಗೆ ಹಣ ಕೊಡಬೇಕು.

### ವಿವಿಧ ಮಹನೀಯರ ಜಯಂತಿ ಆ.7ರಂದು ಪೂರ್ವಭಾವಿ ಸಭೆ

» **ಚಿತ್ರದುರ್ಗ**

ಜಿಲ್ಲಾ ಕೇಂದ್ರದಲ್ಲಿ ವಿವಿಧ ಮಹನೀಯರ ಆಚರಣೆ ಸಂಬಂಧ ಇದೇ ಆಗಸ್ಟ್ 7ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆಗಳನ್ನು ಏರ್ಪಡಿಸಲಾಗಿದೆ. ಆಗಸ್ಟ್ 19ರಂದು ನುಲಿಯ ಚಂದಯ್ಯ ಜಯಂತಿ ಆಚರಣೆ ಕುರಿತಂತೆ ಆ.7ರಂದು ಬೆಳಿಗ್ಗೆ 11ಕ್ಕೆ ಪೂರ್ವಭಾವಿ ಸಭೆ, ಆಗಸ್ಟ್ 20ರಂದು ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಆಚರಣೆ ಕುರಿತಂತೆ ಆ.7ರಂದು ಬೆಳಿಗ್ಗೆ 11.30ಕ್ಕೆ ಪೂರ್ವಭಾವಿ ಸಭೆ ಹಾಗೂ ಆಗಸ್ಟ್ 26ರಂದು ಶ್ರೀಕೃಷ್ಣ ಜಯಂತಿ ಆಚರಣೆ ಕುರಿತಂತೆ ಆ.7ರಂದು ಮಧ್ಯಾಹ್ನ 12ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ.ಪೂರ್ವಭಾವಿ ಸಭೆಗಳ ಅಧ್ಯಕ್ಷತೆಯನ್ನು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ವಹಿಸುವರು. ಸಭೆಗಳಿಗೆ ಎಲ್ಲ ಸಮಾಜದ ಮುಖಂಡರು ಪಾಲ್ಗೊಂಡು ಉಪಯುಕ್ತ ಸಲಹೆ ಸೂಚನೆಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

### ಹೊಸದುರ್ಗ: ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ವಯೋನಿವೃತ್ತಿ, ಇತರೆ ಕಾರಣಗಳಿಂದ ತೆರವಾಗಿರುವ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗೆ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 30 ರಿಂದ ಈಗಾಗಲೇ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅಂಗನವಾಡಿ ಕಾರ್ಯಕರ್ತೆಯರನ್ನು ಆಯ್ಕೆ ಮಾಡಬೇಕಾದ ಅಂಗನವಾಡಿಕೇಂದ್ರಗಳ ಹೆಸರು: ಹೊಸದುರ್ಗ ತಾಲ್ಲೂಕಿನ ಅಗಸರಹಳ್ಳಿ, ಮೆಟ್ಟಿನಹೊಳೆ, ಅಲರಹಳ್ಳಿ, ಅಜ್ಜಿಕಂಸಾಗರ, ಇಟ್ಟಿಗೆಹಳ್ಳಿ, ಬುಕ್ಕಸಾಗರ, ಅಹಮದ್ ನಗರ, ಚಿಕ್ಕಯಗಟಿ, ಕಂಗುವಳ್ಳಿ–1, ಡಿ.ಕೆ.ಕಟ್ಟೆ, ಕಾಡುಸಿದ್ದರಹಟ್ಟಿ, ಬೀಸನಹಳ್ಳಿ, ಸೋಮಸಂದ್ರ, ಕಬ್ಬಳ–1, ಕಾನುಬೇನಹಳ್ಳಿ, ಮಲ್ಲಿಹಳ್ಳಿ, ಶ್ರೀರಾಂಪುರ–3,ತುಂಬಿನಕೆರೆ, ಹಳೆಕಡಿವಾಣಕಟ್ಟೆ ( ಮಿನಿ ಅಂಗನವಾಡಿ ಕೇಂದ್ರ), ವಿದ್ಯಾನಗರ–1 ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗೆಅರ್ಜಿ ಸಲ್ಲಿಸಬಹುದು. ಅಂಗನವಾಡಿ ಸಹಾಯಕಿಯರನ್ನು ಆಯ್ಕೆಮಾಡಬೇಕಾದ ಅಂಗನವಾಡಿ ಕೇಂದ್ರಗಳ ಹೆಸರು: ಹೊಸದುರ್ಗ ತಾಲ್ಲೂಕಿನ ಸಿದ್ದರಾಮನಗರ, ವಿದ್ಯಾನಗರ, 2ನೇ ಯಲಕಪ್ಪನಹಟ್ಟಿ, ಕೆರೆಕೋಡಿಹಟ್ಟಿ, ರಂಗವ್ವನಹಳ್ಳಿ ಲಂ.ಹಟ್ಟಿ, ಹೊನ್ನೇಕೆರೆ, ಜಾನಕಲ್‌ಲಂ.ಹಟ್ಟಿ,ಶಾಂತಿನಗರ–1,ಕೃಷ್ಣಾಪುರ,ಹೊತ್ತರಗೊಂಡನಹಳ್ಳಿ, ಮಾರಬಘಟ್ಟ, ಆದ್ರಿಕಟ್ಟೆ, ಹುಲ್ಲುಕಟ್ಟೆ, ಸಿದ್ದಗೊಂಡನಹಳ್ಳಿ, ಬಳ್ಳೆಕೆರೆ, ಸೊಡರನಾಳ್, ಜಂಗಮನಗರ, ಕೆಲ್ಲೋಡು–2, ಸೋಮಸಂದ್ರ, ಬೆನಕನಹಳ್ಳಿ,ಬೆಲಗೂರು, ಜಯಸುವರ್ಣಾಪುರ ಹಾಗೂ ಜೆ.ಎನ್. ಕೆರೆ –2 ಅಂಗನವಾಡಿ ಕೇಂದ್ರಗಳಿಗೆ ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆ ವೆಬ್‌ಸೈಟ್ https://karnemakaone.kar.nic.in/abcd/ ನ್ನು ಸಂಪರ್ಕಿಸಬಹುದು ಎಂದು ಹೊಸದುರ್ಗ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರ

**ವಿವಿಧ ಮಹನೀಯರ ಜಯಂತಿ: ಆ.7ರಂದು ಪೂರ್ವಭಾವಿ ಸಭೆ**

ಚಿತ್ರದುರ್ಗ: ಜಿಲ್ಲಾ ಕೇಂದ್ರದಲ್ಲಿ ವಿವಿಧ ಮಹನೀಯರ ಆಚರಣೆ ಸಂಬಂಧ ಇದೇ ಆಗಸ್ಟ್ 7ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆಗಳನ್ನು ಏರ್ಪಡಿಸಲಾಗಿದೆ. ಆಗಸ್ಟ್ 19ರಂದು ನುಲಿಯ ಚಂದಯ್ಯ ಜಯಂತಿ ಆಚರಣೆ ಕುರಿತಂತೆ ಆ.7ರಂದು ಬೆಳಿಗ್ಗೆ 11ಕ್ಕೆ ಪೂರ್ವಭಾವಿ ಸಭೆ, ಆಗಸ್ಟ್ 20ರಂದು ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಆಚರಣೆ ಕುರಿತಂತೆ ಆ.7ರಂದು ಬೆಳಿಗ್ಗೆ 11.30ಕ್ಕೆ ಪೂರ್ವಭಾವಿ ಸಭೆ' ಹಮ್ಮಿಕೊಳ್ಳಲಾಗಿದೆ.

## ಪ್ರಮುಖ ಸುದ್ದಿ

# ದಾರ್ಶನಿಕರಿಂದ ಸಾಮೂಹಿಕ ವಿವಾಹಕ್ಕೆ ಉತ್ತೇಜನ

» **ಚಿತ್ರದುರ್ಗ**

ದುಂದುವೆಚ್ಚಕ್ಕೆ ಕಡಿವಾಣ ಹಾಕಲು ಸಾಮೂಹಿಕ ಕಲ್ಯಾಣ ಮಹೋತ್ಸವದಲ್ಲಿ ಹೆಚ್ಚು ಹೆಚ್ಚು ಪಾಲ್ಗೊಳ್ಳಬೇಕು. ಅಂಬೇಡ್ಕರ್, ಗಾಂಧೀಜಿಯವರು ಮೊದಲಾದ ದಾರ್ಶನಿಕರು ಸಾಮೂಹಿಕ ವಿವಾಹಕ್ಕೆ ಉತ್ತೇಜನ ನೀಡಿದರು ಎಂದು ಡಾ. ಬಸವಕುಮಾರ ಸ್ವಾಮೀಜಿ ಹೇಳಿದರು.

ಶ್ರೀಮುರುಘರಾಜೇಂದ್ರ ಮಠದಲ್ಲಿಂದು ನಡೆದ 34ನೇ ವರ್ಷದ ಎಂಟನೇ ತಿಂಗಳ ಸಾಮೂಹಿಕ ಕಲ್ಯಾಣ ಮಹೋತ್ಸವದ ನೇತೃತ್ವ ವಹಿಸಿ ಮಾತನಾಡಿದರು.

ಶ್ರೀಮಂತರು ಕೋಟಿ ಕೋಟಿ ಖರ್ಚು ಮಾಡುವ ಮದುವೆಗಳಲ್ಲಿ ಹಸಿದ ಹೊಟ್ಟೆಗಳಿಗಿಂತ ತುಂಬಿದ ಹೊಟ್ಟೆಗಳಿಗೆ ತುಂಬಿಸುವ ಕೆಲಸ ನಡೆಯುತ್ತದೆ. ಶ್ರೀಮಠವು ಬಡವರ ಪರವಾಗಿ ನಿಂತಿದೆ. ಇಲ್ಲಿ ಆಗಿಹೋಗಿರುವ ಎಲ್ಲ ಜಗದ್ಗುರುಗಳು ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಬಯಲು ಸೀಮೆಯ ನಾಡಿನಲ್ಲಿರುವ ಶ್ರೀಮಠದಲ್ಲಿ ಪ್ರೀತಿ ಇದೆ. ಹಸಿದವರಿಗೆ ಅನ್ನ, ಜ್ಞಾನ ಎಲ್ಲ ರೀತಿಯ ದಾಸೋಹ ನಡೆಯುತ್ತಿದೆ. ದಂಪತಿಗಳಲ್ಲಿ ಪರಸ್ಪರ ಹೊಂದಾಣಿಕೆ ಮುಖ್ಯ. ಪ್ರೀತಿ ಇಲ್ಲದ ಬದುಕು



ಅರ್ಥವಿಲ್ಲದ್ದು.ಪರಸ್ಪರಅರ್ಥೈಸಿಕೊಳ್ಳುವಲ್ಲಿ ನಾವು ಸೋಲಬಾರದು. ಏನೇ ಕಷ್ಟಗಳು ಬಂದರೂ ಜೊತೆಗಿದ್ದುಕೊಂಡು ಎದುರಿಸಬೇಕು. ಸಂಸಾರದ ಬಂಡಿಯನ್ನು ಪ್ರೀತಿಯಿಂದ ಎಳೆಯಬೇಕು ಎಂದರು.

ದಾವಣಗೆರೆ ವಿಶ್ವವಿದ್ಯಾಲಯದ ಇತಿಹಾಸ ಪ್ರಾಧ್ಯಾಪಕ ಪ್ರೊ. ಪಾಲಾಟೆ ವೆಂಕಟರಾವ್ ಮಾತನಾಡಿ, 12ನೇ ಶತಮಾನದ ಆಶೋತ್ತರಗಳನ್ನು ನಿಜವಾಗಿ ಆಚರಿಸುತ್ತಿರುವುದು ಚಿತ್ರದುರ್ಗದ ಶ್ರೀ ಬೃಹನ್ಮಠ. ಯಾವುದೇ ಲಿಂಗಭೇದ ಜಾತಿಭೇದವಿಲ್ಲದೆ ವಿವಾಹಗಳು ನಡೆಯುತ್ತಿರುವುದು ಪ್ರೀತಿಯ ದ್ಯೋತಕವಾಗಿದೆ. ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಶ್ರೀಮಠ ಹೆಸರುವಾಸಿಯಾಗಿದೆ. ಇಲ್ಲಿ ವಿದ್ಯಾದಾನ ಮತ್ತು ಅನ್ನದಾಸೋಹ ನಡೆಯುತ್ತಿರುವುದು ಸಂತಸದ ವಿಷಯ. ಆರ್ಥಿಕವಾಗಿ ಸಾಮಾಜಿಕವಾಗಿ ಜನರನ್ನು ಉನ್ನತಮಟ್ಟಕ್ಕೆ ಕೊಂಡೊಯ್ಯುವುದರಲ್ಲಿ ಶ್ರೀಮಠದ ಹಿರಿಮೆ ದೊಡ್ಡದಾಗಿದೆ. ಎಲ್ಲರನ್ನು ಸಮಾನವಾಗಿ ಪರಿಗಣಿಸುವ ಮಠವು ಕಳೆದ 35ವರ್ಷಗಳಿಂದ ಉಚಿತ ಸಾಮೂಹಿಕ ಕಲ್ಯಾಣ ಮಹೋತ್ಸವವನ್ನು ನಿರಂತರವಾಗಿ ನಡೆಸಿಕೊಂಡು ಬಂದಿರುವುದು ಶ್ಲಾಘನೀಯ ಎಂದರು.

ಡಾ. ಬಸವಪ್ರಭು ಸ್ವಾಮಿಗಳು ಮಾತನಾಡಿ, ದೇಹ ಎರಡಾದರೂ ಮನಸ್ಸು ಒಂದೇ ರೀತಿ ಇರಬೇಕು. ಹಾಗೆ ನವದಂಪತಿಗಳು ಒಂದೇಯಾಗಿರಬೇಕು. ಸಂಸಾರದಲ್ಲಿ ನೆಮ್ಮದಿ ಬೇಕು. ಕಾರು, ಸಂಪತ್ತು ಇದ್ದರೆ ಮಾತ್ರ ಸಾಂಸಾರಿಕ ಬದುಕು ಸುಧಾರಿಸುವುದಿಲ್ಲ. ಆದರೆ ಸತಿ ಪತಿಯ ಮಧ್ಯೆ ಪ್ರೀತಿ ಇರಬೇಕು. ಎಷ್ಟೋ ದಂಪತಿಗಳ ನಡುವೆ ಮಾತುಕತೆಗಳು ಇರುವುದಿಲ್ಲ. ಗಂಡ ಹೆಂಡತಿ ಜೊತೆಯಾಗಿರಬೇಕು. ಕೈ ಕೈ ಹಿಡಿದುಕೊಂಡವರು ಕೊನೆಯವರೆಗೆ ಹಾಗೇ ಇರಬೇಕು. ಪ್ರೀತಿಗೆ ಬಡತನವಿರ 'ಬಾರದು. ಪ್ರೀತಿಯ ಜಲ ಬತ್ತಿ ಹೋಗಬಾರದು ಎಂದು ತಿಳಿಸಿದರು.

ಸಂಸಾರದಲ್ಲಿ ಸುಖದುಃಖ ಬರುವುದು ಸಾಮಾನ್ಯ. ಅನುಸರಿಸಿಕೊಂಡು ಹೋಗಬೇಕು. ಸಂಸಾರವೆಂಬ ನದಿಯಲ್ಲಿ ಸಾಗುವಾಗ ತೆಪ್ಪದಂತೆ ತೆಪ್ಪಗಿರಬೇಕು. ಜಗಳ ಪ್ರೀತಿಯಿಂದಿರಬೇಕು. ಯಾವ ದಿನವೂ ಶ್ರೇಷ್ಠ, ಕನಿಷ್ಠವಲ್ಲ. ಎಲ್ಲ ದಿನವೂ ಶ್ರೇಷ್ಠ ಎನ್ನುವ ಮಾತಿಗೆ ಮುರುಘಾಮಠವು ಸಾಕ್ಷಿಯಾಗಿದೆ. ವೈಚಾರಿಕ ಮಂತ್ರ ಮಾಂಗಲ್ಯ ಇಲ್ಲಿ ನಡೆಯುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ 4 ಜೋಡಿಗಳು ವಿವಾಹ ನೆರವೇರಿತು. ಜಮುರಾ ಕಲಾವಿದರು ಪ್ರಾರ್ಥಿಸಿದರು. ವೀರಭದ್ರಪ್ಪ



# ಕಾಣೆಯಾಗುವ ಬಾಲ್ಯದ ಆದರ್ಶಗಳು......

ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಣ ಗುಣಮಟ್ಟದ ಪರೀಕ್ಷೆ ಮಾಡುವ ತನಿಖಾಧಿಕಾರಿಗಳು ವಿದ್ಯಾರ್ಥಿಗಳನ್ನು ಪ್ರಶ್ನೆ ಮಾಡುತ್ತಾರೆ........

ನೀವು ದೊಡ್ಡವರಾದ ಮೇಲೆ ಏನಾಗಲು ಇಷ್ಟ ಪಡುತ್ತೀರ ?

**ಒಬ್ಬ**

" ನಾನು ಪೋಲೀಸ್ ಅಧಿಕಾರಿಯಾಗಿ ಕಳ್ಳರನ್ನು ಹಿಡಿದು ಜನರಿಗೆ ಭದ್ರತೆ ನೀಡುತ್ತೇನೆ."

**ಇನ್ನೊಬ್ಬ**

" ನಾನು ಐಎಎಸ್ ಪಾಸು ಮಾಡಿ ಬಡವರಿಗೆ ನನ್ನ ಕೈಲಾದ ಸಹಾಯ ಮಾಡುತ್ತೇನೆ. "

**ಮತ್ತೊಬ್ಬ**

" ನಾನು ಡಾಕ್ಟರ್ ಆಗಿ ಹಣವಿಲ್ಲದ ಬಡ ರೋಗಿಗಳಿಗೆ ಚಿಕಿತ್ಸೆ ನೀಡುತ್ತೇನೆ."

**ಮಗದೊಬ್ಬ**

" ನಾನು ಸೈನ್ಯ ಸೇರಿ ದೇಶ ರಕ್ಷಣೆ ಮಾಡುತ್ತೇನೆ "

**ಅವನೊಬ್ಬ**

" ನಾನು ಪತ್ರಕರ್ತನಾಗಿ ಸಮಾಜದ ಹುಳುಕುಗಳನ್ನು ತೋರಿಸಿ ಪ್ರಜಾಪ್ರಭುತ್ವದ ಕಾವಲುಗಾರನಾಗುತ್ತೇನೆ. "

**ಇವನೊಬ್ಬ**

" ನಾನು ಕೃಷಿ ವಿಜ್ಞಾನಿಯಾಗಿ ರೈತರ ಸಂಕಷ್ಟಗಳಿಗೆ ಪರಿಹಾರ ಕಂಡುಹಿಡಿಯುತ್ತೇನೆ "

**ಅಲ್ಲೊಬ್ಬ**

" ನಾನು ಸಮಾಜ ಸೇವಕನಾಗಿ ನಿಸ್ವಾರ್ಥದಿಂದ ಜನರ ಸೇವೆ ಮಾಡುತ್ತೇನೆ."

**ಇಲ್ಲೊಬ್ಬ**


" ನಾನು ರಾಜಕಾರಣಿಯಾಗಿ ಪ್ರಾಮಾಣಿಕತೆಯಿಂದ ಜನರ ಕಷ್ಟಗಳಿಗೆ ಸ್ಪಂದಿಸುತ್ತೇನೆ. "

**ಯಾರೋ ಒಬ್ಬ**

" ನಾನು ಇಂಜಿನಿಯರ್ ಆಗಿ ಅತ್ಯುತ್ತಮ ಗುಣಮಟ್ಟದ ರಸ್ತೆ ಸೇತುವೆ ನಿರ್ಮಿಸುತ್ತೇನೆ ."

ಕೆಲವರು ಕ್ರೀಡೆ ಸಂಗೀತ ಶಿಕ್ಷಣ ಸಾಹಿತ್ಯ ವ್ಯಾಪಾರ ಉದ್ಯಮ ವಿಜ್ಞಾನ ಹೀಗೆ ನಾನಾ ಕ್ಷೇತ್ರಗಳಲ್ಲಿ ಸಾಧನೆ ಮಾಡುವ ಕನಸು ಕಾಣುತ್ತಾರೆ......

ಅದೃಷ್ಟವಶಾತ್ ಅವರಲ್ಲಿ ಕೆಲವರು ತಾವು ಅಂದು









ಆಸೆ ಪಟ್ಟ ಗುರಿ ತಲುಪುತ್ತಾರೆ.......

**ಆದರೆ,**

ಅವರು ಗುರಿ ತಲುಪಿದ ನಂತರ ತಾವು ಶಾಲೆಯಲ್ಲಿದ್ದಾಗ ಮುಗ್ದತೆಯಿಂದ ಕನಸು ಕಂಡ ಆ " ಸೇವೆಯನ್ನು " ನಿಜವಾಗಿಯೂ ಕಾರ್ಯರೂಪಕ್ಕೆ ತರುವರೇ ?

**ಆ ವ್ಯವಸ್ಥೆ ನಮ್ಮಲ್ಲಿ ಇದೆಯೇ ?**

ನನಗೆ ತಿಳಿದಿರುವಂತೆ ಶೇಕಡಾ 10% ಜನ ಆ ಬಾಲ್ಯದ ನೆನಪುಗಳನ್ನು ಹಾಗೇ ಉಳಿಸಿಕೊಂಡು ಸಂಪೂರ್ಣ ಅಲ್ಲದಿದ್ದರೂ ಸಾಧ್ಯವಾದ ಮಟ್ಟಿಗೆ ಜೀವನ ಪೂರ್ತಿ ಅದನ್ನು ಕಾರ್ಯಗತಗೊಳಿಸಲು ಪ್ರಯತ್ನಿಸುತ್ತಾರೆ.

ಉಳಿದವರು.......

**ದೆಲವರು,**

ಪ್ರಾರಂಭದಲ್ಲಿ ಸ್ವಲ್ಪ ಪ್ರಯತ್ನಿಸಿ ನಂತರ ವ್ಯವಸ್ಥೆಯೊಳಗೆ ಒಬ್ಬರಾಗುತ್ತಾರೆ.

**ಇನ್ನೊಬ್ಬರು,**

ಕೌಟುಂಬಿಕ – ಸಾಂಸಾರಿಕ ಬಂಧನದಲ್ಲಿ ಸಿಲುಕಿ ಹಳೆಯದನ್ನು ಮರೆಯುತ್ತಾರೆ.

**ಮತ್ತೊಬ್ಬರು,**

ಹಣ ಅಧಿಕಾರದ ದುರಾಸೆಗೆ ಬಿದ್ದು ಗತಕಾಲದ ದಿನಗಳನ್ನು ಮರೆತು ಭ್ರಷ್ಟರಾಗುತ್ತಾರೆ.

**ಹಲವರು,**

ರಾಜಕೀಯ – ವಾಣಿಜ್ಯೋದ್ಯಮಿಗಳ ಒತ್ತಡಕ್ಕೆ ಮಣಿದು ಈ ಕೆಟ್ಟ ವ್ಯವಸ್ಥೆಯೊಳಗೆ ಸೇರಿ ಹೋಗುತ್ತಾರೆ.

**ಇನ್ನೊಂದಿಷ್ಟು,**

ತೋರಿಕೆಗೆ ಒಳ್ಳೆಯವರಂತೆ ನಟಿಸುತ್ತಾ ಒಳಗೊಳಗೆ ಅಪಾರ ಭ್ರಷ್ಟರಾಗಿರುತ್ತಾರೆ.

**ಮತ್ತೊಂದಿಷ್ಟು,**

ಸ್ವಲ್ಪ ಆ ಕಡೆ ಸ್ವಲ್ಪ ಈ ಕಡೆ ತೊಳಲಾಡುತ್ತಾ ಎರಡನ್ನೂ ಮಾಡಲು ಧೈರ್ಯ ಸಾಲದೆ ಒಳಗೊಳಗೆ ಅಸಹಾಯಕತೆಯಿಂದ ನರಳುತ್ತಾ ಸಾಗುತ್ತಿರುತ್ತಾರೆ.

ಹೀಗೆ ಬಾಲ್ಯದ ಕನಸುಗಳು ಕಮರಿ ಹೋಗುತ್ತಾ ಇಡೀ ವ್ಯವಸ್ಥೆ ವಿನಾಶದ ಅಂಚಿಗೆ ನೂಕಲ್ಪಡುತ್ತಿದೆ.

ನಮ್ಮ ಸೋಷಿಯಲ್ ಸ್ಟ್ರಕ್ಚರ್ ನ ಒಳ್ಳೆಯ ಅಡಿಪಾಯ ವೇದಿಕೆಯ ಮಟ್ಟಕ್ಕೆ ಬರುವ ಹೊತ್ತಿಗೆ ಶಿಥಿಲವಾಗಿರುತ್ತದೆ. ಆ ಶಿಥಿಲ ವೇದಿಕೆಯ ಮೇಲೆ Perform ಮಾಡುವ ಹೊತ್ತಿಗೆ ವ್ಯಕ್ತಿ ಆಸಕ್ತಿಯನ್ನೇ ಕಳೆದುಕೊಂಡು ನಿಸ್ತೇಜಿತನಾಗಿರುತ್ತಾನೆ.

ವೀಕ್ಷಕರು ಪ್ರಾರಂಭದಲ್ಲಿ ಅಪಾರ ನಿರೀಕ್ಷೆ ಇಟ್ಟುಕೊಂಡಿರುತ್ತಾರೆ. ನಂತರ ಕ್ರಮೇಣ ಎಲ್ಲರ ಸಾಮರ್ಥ್ಯವೂ ತೃಪ್ತಿ ತರದೇ ಇದ್ದಾಗ ನಿರಾಸೆಯಿಂದ ವ್ಯವಸ್ಥೆಗೆ ಹೊಂದಿಕೊಳ್ಳತೊಡಗುತ್ತಾರೆ.

ಯಾರಾದರೂ ಅಷ್ಟೆ ಎಂದು ನಿರಾಸಕ್ತರಾಗುತ್ತಾರೆ.

ಬಹುತೇಕ ಭಾರತೀಯ ಸಮಾಜದ ಇಂದಿನ ಸ್ಥಿತಿ ಹೀಗೇ ಆಗಿದೆ.

ಬದಲಾವಣೆ ಅಡಿಪಾಯದಿಂದಲೇ ಪ್ರಾರಂಭವಾಗಬೇಕಿದೆ ಮತ್ತು ಕೊನೆಯವರೆಗೂ ಅದೇ ಗುಣಮಟ್ಟ ಕಾಪಾಡಬೇಕಿದೆ.

ಅದನ್ನು ನಾವೆಲ್ಲರೂ ಅತ್ಯಂತ ಜವಾಬ್ದಾರಿಯಿಂದ ನಿರ್ವಹಿಸುವ ದಿನಗಳು ಶೀಘ್ರವಾಗಿ ಬರಲಿ ಎಂದು ಆಶಿಸುತ್ತಾ.....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

## ವೀರಶೈವ ಅಭಿವೃದ್ಧಿ ನಿಗಮ: ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಕರ್ನಾಟಕ ವೀರಶೈವ ಲಿಂಗಾಯಿತ ಅಭಿವೃದ್ಧಿ ನಿಗಮದಿಂದ ವೀರಶೈವ–ಲಿಂಗಾಯತ ಜಾತಿ ಹಾಗೂ ಉಪಜಾತಿಗೆ ಸೇರಿದ ಸಮುದಾಯದ ಜನರ (ಪ್ರವರ್ಗ–3ಬಿ) ಅಭಿವೃದ್ಧಿಗಾಗಿ 2024–25ನೇ ಸಾಲಿಗೆ ಅನಿಷ್ಠಾನಗೊಳ್ಳುತ್ತಿರುವ ವಿವಿಧ ಯೋಜನೆಗಳಿಗೆ ಆನ್‍ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.ಈ ನಿಗಮಡಿಯಲ್ಲಿ ಅನುಷ್ಟಾನಗೊಳಿಸುತ್ತಿರುವ ಬಸವ ಬೆಳಗು ಯೋಜನೆ, ಜೀವಜಲ ಯೋಜನೆ, ಕಾಯಕ ಕಿರಣ ಯೋಜನೆ, ಭೋಜನಾಲಯ ಕೇಂದ್ರ, ವಿಭೂತಿ ನಿರ್ಮಾಣ ಘಟಕ, ಸ್ವಾವಲಂಬಿ ಸಾರಥಿ ಯೋಜನೆ( ವಾಣಿಜ್ಯ ಬ್ಯಾಂಕ್‍ಗಳ ಸಹಯೋಗದೊಂದಿಗೆ), ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕ್‍ಗಳ ಸಹಯೋಗದೊಂದಿಗೆ) ಹಾಗೂ ಸ್ವಾತಂತ್ರ ಅಮೃತ ಮಹೋತ್ಸವದ ಮುನ್ನಡೆ ಯೋಜನೆ ಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ವಿಶೇಷ ಸೂಚನೆ: ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು. ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್‍ಮಾಡಿಬೇಕು. ನಿಗಮವು ಅನುಷ್ಠಾನಗೊಳಿಸುವ ಈ ಮೇಲ್ಕಂಡ ಯೋಜನೆಗಳಲ್ಲಿ ಸರ್ಕಾರದ ವಿವೇಚನಾ ಕೋಟಾದಡಿ ಸೌಲಭ್ಯ ಪಡೆಯಬಯಸುವವರು ಸಹ ಆನ್ಲೈನ್ ಮೂಲಕ ಅರ್ಜಿ ಸಲ್ಲಸಬಹುದು. ಒಂದು ಕಟುಂಬದ ಒಬ್ಬ ಸದಸ್ಯರು ಮಾತ್ರ ಮೇಲ್ಕಂಡ ಯಾವುದಾದರೂ ಒಂದು ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

ಅರ್ಹ ಫಲಾಪೇಕ್ಷಿಗಳು ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್, ನಾಗರೀಕ ಸೇವಾ ಕೇಂದ್ರಗಳಲ್ಲಿ ದಾಖಲಾತಿಗಳೊಂದಿಗೆ ಸೇವಾಸಿಂಧು ಪೋರ್ಟಲ್‍ನಲ್ಲಿ ಅರ್ಜಿಗಳನ್ನು ಸಲ್ಲಿಸಬೇಕಾಗಿರುತ್ತದೆ.

ಆಧಾರ್ ಕಾರ್ಡನಲ್ಲಿರುವಂತೆ ಅರ್ಜಿದಾರರ ಹೆಸರು, ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು. ನಿಗಮದ ಯೋಜನೆಗಳಲ್ಲಿ ಒಂದು ಬಾರಿ ಯಾವುದಾದರು ಯೋಜನೆಯ ಪ್ರಯೋಜನೆ ಪಡೆದಿದ್ದಲ್ಲಿ ಅಂತಹವರು ಹಾಗೂ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023–24ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿತರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾV https://kvldcl.karnataka.gov.in ಅಥವಾ ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿಯ ದೂರವಾಣಿ ಸಂಖ್ಯೆ 08194–220882 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕಿ ಹೆಚ್.ಶಿಲ್ಪಾ ತಿಳಿಸಿದ್ದಾರೆ.

## ಡಾಕ್ಟರೇಟ್ ಪ್ರಶಸ್ತಿ ತಿರಸ್ಕರಿಸಿದ ಕಿಚ್ಚ ಸುದೀಪ್

» **ಬೆಂಗಳೂರು**

ಕನ್ನಡ ಅಭಿಮಾನಿಗಳ ನೆಚ್ಚಿನ ನಟ ಕಿಚ್ಚ ಸುದೀಪ್,ಹಲವಾರು ಕನ್ನಡ ಸಿನಿಮಾಗಳ ಮೂಲಕ ಅಭಿಮಾನಿಗಳ ಮನ ಗೆದ್ದಿರುವ ಸುದೀಪ್ ಅವರು ಚಿತ್ರರಂಗಕ್ಕೆ ನೀಡಿದ ಕೊಡುಗೆ ಅಪಾರ.

ಸ್ಯಾಂಡಲ್‍ವುಡ್‍ನ ಹಲವಾರು ನಟರು ಸಾಕಷ್ಟು ಅದ್ಭುತ ಕಾರ್ಯಗಳನ್ನು ಮಾಡುತ್ತಿದ್ದಾರೆ.ಆ ಪೈಕಿ ಕಿಚ್ಚ ಸುದೀಪ್ ಕೂಡ ಒಬ್ಬರು.ಅವರ ಕಾರ್ಯಕ್ಕೆ ಮೆಚ್ಚಿ ತುಮಕೂರು ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ನೀಡಲು ಮುಂದಾಗಿತ್ತು.ಆದರೆ ಸುದೀಪ್ ಅವರು ಇದನ್ನು ನಿರಾಕರಿಸಿದ್ದಾರೆ. ನಟ ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ.ಇದನ್ನು ಗುರುತಿಸಿ ನೀಡಲು ಮುಂದಾದ ಪ್ರಶಸ್ತಿಯನ್ನು ಸುದೀಪ್ ನಿರಾಕರಿಸಿದ್ದಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ. ತುಮಕೂರು ವಿವಿ ಸಿಂಡಿಕೇಟ್ ಸಭೆಯಲ್ಲಿ ಚರ್ಚೆ ನಡೆಸಿ ಸುದೀಪ್ ಅವರಿಗೆ ಗೌರವ ಡಾಕ್ಟರೇಟ್ ನೀಡಲು ನಿರ್ಧರಿಸಿರುವುದಾಗಿ ಗಮನಕ್ಕೆ ತಂದಿದೆ.ಆಗ ಸುದೀಪ್ ವಿಶ್ವವಿದ್ಯಾಲಯದ ನಿರ್ಧಾರಕ್ಕೆ ಹೃದಯಪೂರ್ವಕವಾಗಿ ಧನ್ಯವಾದ ತಿಳಿಸಿ ವಿನಮ್ರವಾಗಿ ನಿರಾಕರಿಸಿದ್ದಾರೆ.ಸಮಾಜದಲ್ಲಿಸೇವೆಮಾಡಿದ ನನಗಿಂತ ಅನೇಕ ಹಿರಿಯರಿದ್ದಾರೆ.ಅವರಿಗೆ ಡಾಕ್ಟರೇಟ್ ನೀಡಿ ಎಂದು ತಿಳಿಸಿದ್ದಾರೆ. ಕಿಚ್ಚ,ಅಭಿನಯ ಚಕ್ರವರ್ತಿ' ಎಂದೇ ಖ್ಯಾತಿ ಪಡೆದಿರುವ ಸುದೀಪ್ ಬಹುಮುಖ ಹಾಗೂ ಬಹುಬಾಷಾ ನಟರಾಗಿದ್ದಾರೆ. ವಿವಿಧ ಖಾಸಗಿ ಕಾರ್ಯಕ್ರಮಗಳಲ್ಲಿ ನಿರೂಪಕರಾಗಿ. ಸಿಸಿಲ್ ಕ್ರಿಕೆಟ್ ಗಾರನಾಗಿ ರಾರಾಜಿಸಿದ್ದಾರೆ. ಸುದೀಪ್ ಬೆಂಗಳೂರಿನ ದಯಾನಂದ ಸಾಗರ್ ಇಂಜಿನಿಯರಿಂಗ್ ಕಾಲೇಜಿನಲ್ಲಿ ಮೆಕ್ಯಾನಿಕಲ್ ಇಂಜಿನಿಯರಿಂಗ್ ಪದವಿ ಪಡೆದಿದ್ದಾರೆ.



ಕ್ರಿಕೆಟ್‍ನಲ್ಲಿ ತಮ್ಮ ಕಾಲೇಜನ್ನು ಪ್ರತಿನಿಧಿಸಿದ ಸುದೀಪ್ ಅವರಿಗೆ ನಟನೆ ಅಂದ್ರೆ ಅಚ್ಚುಮೆಚ್ಚಾಗಿತ್ತು. ಹೀಗಾಗಿ ಮುಂಬೈನ ರೋಷನ್ ತನೇಜಾ ಸ್ಕೂಲ್ ಆಫ್ ಆಕ್ಟಿಂಗ್ ಸೇರಿಕೊಂಡು ತರಬೇತಿ ಪಡೆದರು. ನಂತರ ಉದಯ ಟಿವಿಯಲ್ಲಿ ಪ್ರಸಾರವಾಗುತ್ತಿದ್ದ ಸುಧಾಕರ್ ಭಂಡಾರಿ ನಿರ್ದೇಶನದ 'ಪ್ರೇಮದ ಕಾದಂಬರಿ' ಮೂಲಕ ಕಿರುತೆರೆಗೆ ಪದಾರ್ಪಣೆ ಮಾಡಿದರು. ಪ್ರಶಸ್ತಿಗಳು ಸನ್ಮಾನಗಳು ಗೌರವಗಳು ಬೇಕೆಂದು ಹಂಬಲಿಸುವವರ ಮಧ್ಯೆ ತಮ್ಮ ಸಾಧನೆಯ ಮೂಲಕ ಕರ್ನಾಟಕಕ್ಕೆ ತಮ್ಮದೇ ಕೊಡುಗೆಯನ್ನು ಕೊಟ್ಟಿದ್ದಾರೆ ಆದರೂ ಸಹ ನನಗಿಂತಲೂ ಅರ್ಹರಿದ್ದಾರೆ ಎಂದು ವಿನಮ್ರತಿಯಿಂದ ಗೌರವವನ್ನು ತಿರಸ್ಕರಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T